ಸಂಪುಟ : 9 ಸಂಚಿಕೆ 224 ಪುಟ : 4 ಬೆಲೆ: 3.00 ಶನಿವಾರ ಅಕ್ಟೋಬರ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 224 Pages : 4 Price : 3.00 Saturday October 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ದಸರಾ ಹಬ್ಬದ ಶುಭಾಶಯಗಳು

**ವಿಜಯಸಾಕ್ಷಿ** ಓದುಗರಿಗೆ, ಏಜೆಂಟರಿಗೆ, ಜಾಹೀರಾತುದಾರರಿಗೆ, ಅಭಿಮಾನಿಗಳಿಗೆ ಹಾಗೂ ನಾಡಿನ ಸಮಸ್ತ ಜನತೆಗೆ ಆಯುಧ ಪೂಜೆ ಹಾಗೂ ವಿಜಯ ದಶಮಿ ಹಬ್ಬದ ಶುಭಾಶಯಗಳು.

**ಬಿಡುವು**

ನಾಡಹಬ್ಬ ವಿಜಯದಶಮಿ ಪ್ರಯುಕ್ತ ಇಂದು ಪತ್ರಿಕಾ ಕಾರ್ಯಾಲಯಕ್ಕೆ ರಜೆ ಇರುವುದರಿಂದ ನಾಳೆಯ ಸಂಚಿಕೆ ಪ್ರಕಟವಾಗುವುದಿಲ್ಲ.

–ಸಂಪಾದಕೀಯ ಮಂಡಳಿ

### ಹುಬ್ಬಳ್ಳಿ ಗಲಭೆ ಪ್ರಕರಣ ಹಿಂಪಡೆದ ರಾಜ್ಯ ಸರ್ಕಾರ । ಸರ್ಕಾರದ ವಿರುದ್ಧ ಹರಿಹಾಯ್ದ ಕೇಂದ್ರ ಸಚಿವ ಪ್ರಹ್ಲಾದ ಜೋಶಿ

# ಕಾಂಗ್ರೆಸ್ ಸರ್ಕಾರದ್ದು ತುಷ್ಟೀಕರಣದ ರಾಜಕೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಲ್ಲಿ 2022ರಲ್ಲಿ ನಡೆದ ಪೊಲೀಸರ ಮೇಲಿನ ಕಲ್ಲು ತೂರಾಟ ಪ್ರಕರಣವನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಹಿಂಪಡೆದಿದ್ದು, ತುಷ್ಟೀಕರಣ ರಾಜಕಾರಣ ಮಾಡುತ್ತಿದೆ. ಕೂಡಲೇ ಇಂತಹ ರಾಜ–ಕಾರಣ ಕೈ ಬಿಡಬೇಕು. ಇಲ್ಲವಾದಲ್ಲಿ ಸರ್ಕಾರದ ನಿರ್ಧಾರದ ವಿರುದ್ಧ ನಾವು ಕೋರ್ಟ್ ಮೆಟ್ಟಿಲೇರುತ್ತೇವೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದರು.

ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಡಿಜೆ ಹಳ್ಳಿ, ಕೆಜೆ ಹಳ್ಳಿ ಗಲಭೆಯಲ್ಲೂ ಅಮಾಯರಿದ್ದಾರೆ ಅಂದಿದ್ದಾರೆ. ಜಮೀರ್ ಅಹ್ಮದ್ ಗೃಹ ಸಚಿವರಿಗೆ ಪತ್ರ ಬರೆದು ಡಿಜೆ ಹಳ್ಳಿ, ಕೆಜೆ ಹಳ್ಳಿ, ಹುಬ್ಬಳ್ಳಿ ಗಲಭೆ ಕೇಸ್



ವಾಪಾಸ್ ಪಡೆಯಬೇಕೆಂದು ಕೇಳಿಕೊಂಡಿದ್ದರು. ಅದಾದ ನಂತರ ಪರಿಶೀಲಿಸಿ ಕ್ರಮ ಕೈಗೊಳ್ಳಿ ಎಂದು ಗೃಹ ಮಂತ್ರಿಗಳು ಹೇಳುತ್ತಾರೆ. ರಾಜ್ಯದ ಸುರಕ್ಷತೆಯ ಬಗ್ಗೆ ಗೃಹ ಮಂತ್ರಿಗಳಿಗೆ ಕಳಕಳಿ ಇದ್ದರೆ ಪ್ರಕರಣವನ್ನು ತಕ್ಷಣ ವಿಲೇವಾರಿಗೆ ಹಾಕಬೇಕಿತ್ತು ಎಂದು ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಹೈಕೋರ್ಟ್, ಸುಪ್ರೀಂ ಕೋರ್ಟ್‌ನಲ್ಲಿ ಬೇಲ್ ತಿರಸ್ಕೃತವಾಯಿತು. ಸರ್ಕಾರಿ ವಕೀಲರನ್ನೂ ಬದಲಾಯಿಸಲಾಯಿತು. ▶▶ 4ನೇ ಪುಟಕ್ಕೆ

ಕೋವಿಡ್ ಸಂದರ್ಭದಲ್ಲಿ ನಡೆದ ಅಕ್ರಮ ಪ್ರಕರಣವನ್ನು ಎಸ್‌ಐಟಿಗೆ ವಹಿಸುವ ವಿಚಾರವಾಗಿ ಪ್ರತಿಕ್ರಿಯಿಸಿ, ಕಾಂಗ್ರೆಸ್ ಪಕ್ಷದ ಬೆದರಿಕೆಯ ತಂತ್ರಕ್ಕೆ ನಾವು ಹೆದರುವುದಿಲ್ಲ. ಬಿಜೆಪಿ ಹೋರಾಟದ ಮೂಲಕ ಸಂಘಟನೆ ಮಾಡಿಕೊಂಡು ಬಂದಿದೆ. ಒಂದುವರೆ ವರ್ಷದಿಂದ ಯಾರೂ ತನಿಖೆ ಮಾಡಬೇಡಿ ಎಂದವರು, ಈಗ ಸಿದ್ದರಾಮಯ್ಯ ಪ್ರಕರಣ ಹೊರ ಬಂದಮೇಲೆ ಈಗ ಶುರು ಮಾಡಿದ್ದಾರೆ. ಹೆಚ್.ಡಿ. ಕುಮಾರಸ್ವಾಮಿ, ಯಡಿಯೂರಪ್ಪನವರ ವಿಚಾರ ಎತ್ತಿದರು. ಯಡಿಯೂರಪ್ಪನರ ಪ್ರಕರಣಕ್ಕೆ ಸಂಬಂಧಿಸಿ, ದೂರುದಾರರ ಮಾನಸಿಕ ಸ್ಥಿತಿ ಸರಿ ಇಲ್ಲ ಎಂದಿದ್ದರು. ಈಗ ಯಾಕೆ ಅದನ್ನೇ ಗಂಭೀರವಾಗಿ ಪ್ರಸ್ತಾಪ ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು.

## ರತನ ಟಾಟಾ ಅಗಲಿಕೆಗೆ ತೋಂಟದ ಶ್ರೀಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಗದಗ



ಭಾರತದ ಔದ್ಯೋಗಿಕ ಕ್ಷೇತ್ರದ ದಿಗ್ಗಜರೆನಿಸಿದ್ದ ಅಪ್ಪಟ ದೇಶಪ್ರೇಮಿ, ಅಭಿವೃದ್ಧಿಯ ಹರಿಕಾರ ರತನ್ ಟಾಟಾ ಅವರ ನಿಧನದಿಂದಾಗಿ ದೇಶವು ಒಬ್ಬ ಮಹಾನ್ ಉದ್ಯಮಿಯನ್ನು ಕಳೆದುಕೊಂಡಂತಾಗಿದೆ. ಇದು ಎಂದೆಂದೂ ಭರಿಸಲಾಗದ ನಷ್ಟ ಎಂದು ಎಡೆಯೂರು–ಡಂಬಳ–ಗದಗ ಜಗದ್ಗುರು ತೋಂಟ–ದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

ಭಾರತದ ಜನ ಸಾಮಾನ್ಯರಿಗಾಗಿ ಮಿಡಿದ ಹೃದಯ ರನತ್ ಟಾಟಾ ಅವರದಾಗಿತ್ತು. ದೇಶದ ಉದ್ದಗಲಕ್ಕೂ ಉದ್ದಿಮೆಗಳನ್ನು ಪ್ರಾರಂಭಿಸಿ, ಲಕ್ಷ ಲಕ್ಷ ಜನರಿಗೆ ಉದ್ಯೋಗದಾತರಾಗಿದ್ದರು. ಅತ್ಯಂತ ಸರಳ ಹಾಗೂ ಸಾದಾ ಜೀವನ ನಡೆಸಿದ ಅವರು ದೇಶವಾಸಿಗಳಿಗೆಲ್ಲ ಮಾದರಿಯಾಗಿದ್ದರು. ಹೆಸರಿನಂತೆ ಅವರ ಬದುಕೂ ಕೂಡ ಮೌಲ್ಯಯುತವಾಗಿತ್ತು. ದೇಶದ ಅಭಿವೃದ್ಧಿಯಲ್ಲಿ ಅವರ ಹಿರಿದಾದ ಪಾತ್ರವನ್ನು ಗಮನಿಸಿ ಅವರಿಗೆ ಭಾರತ ಸರಕಾರವು ದೇಶ ಅತ್ಯುನ್ನತ 'ಭಾರತ ರತ್ನ' ನೀಡಿ ಗೌರವಿಸಬೇಕೆಂಬುದು ಸಮಸ್ತ ಭಾರತೀಯರ ಹೃದಯಾಂತರಾಳದ ಅಭಿಲಾಷೆಯಾಗಿದೆ. ಸರಕಾರ ಕೂಡಲೇ ಆ ಕೆಲಸ ಮಾಡಲಿ ಎಂದು ಶ್ರೀಗಳು ತಮ್ಮ ಶೋಕ ಸಂದೇಶದಲ್ಲಿ ಕೇಂದ್ರ ಸರಕಾರವನ್ನು ಆಗ್ರಹಿಸಿದ್ದಾರೆ.

### ಗೊರವಯ್ಯ ನುಡಿದ ಕಾರ್ಣಿಕ

# 'ಆಕಾಶನ ಚಿಗುರೀತಲೇ, ಬೇರೆಲ್ಲಾ ಮುತ್ತಾಯಿತಲೇ ಪರಾಕ್'

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ರಾಣೆಬೆನ್ನೂರು ತಾಲೂಕಿನ ಸುಕ್ಷೇತ್ರ ದೇವರಗುಡ್ಡ ಮಾಲತೇಶ ಸ್ವಾಮಿ ಕಾರ್ಣಿಕೋತ್ಸವ ನಡೆದಿದ್ದು, 'ಆಕಾಶನ ಚಿಗುರೀತಲೇ ಬೇರೆಲ್ಲಾ ಮುತ್ತಾಯಿತಲೇ ಪರಾಕ್' ಎಂದು ಗೊರವಪ್ಪ ವರ್ಷದ ಐತಿಹಾಸಿಕ ಕಾರ್ಣಿಕ ಭವಿಷ್ಯವಾಣಿ ನುಡಿದಿದ್ದಾರೆ.

ಮಳೆ, ಬೆಳೆ, ರಾಜಕೀಯ, ಅನಾಹುತಗಳ ಬಗ್ಗೆ ಗೊರವಪ್ಪ, ಕಾರ್ಣಿಕ ನುಡಿಯುವ ಭವಿಷ್ಯವಾಣಿ ನಿಜವಾಗುತ್ತದೆ ಎಂಬ ನಂಬಿಕೆಯಿದೆ. ಕಾರ್ಣಿಕೋತ್ಸವಕ್ಕೂ ಮುನ್ನ 9 ದಿನ ಉಪವಾಸವಿದ್ದ ಗೊರವಯ್ಯ ನಾಗಪ್ಪಜ್ಜ ಉರ್ಮಿ 21 ಅಡಿ ಬಿಲ್ಲನ್ನೇರಿ ಕಾರ್ಣಿಕ ನುಡಿದಿದ್ದಾರೆ.

ಗೊರವಯ್ಯ ನಾಗಪ್ಪಜ್ಜ ಅವರು ನುಡಿದಿರುವ ಪ್ರಸಕ್ತ ವರ್ಷದ ಭವಿಷ್ಯವಾಣಿಯ ವಿಶ್ಲೇಷಣೆ ಮಾಡಿದ ಪ್ರಧಾನ ಅರ್ಚಕರಾದ ಸಂತೋಷ ಭಟ್ಟ, ಆಕಾಶದತ್ತ





ಚಿಗುರಿತಲೇ, ಬೇರೆಲ್ಲಾ ಮುದ್ದಾತಲೇ ಪರಾಕ್ ಅಂತ ಕಾರ್ಣಿಕ ನುಡಿದಿದೆ. ಗೊರವಯ್ಯನವರು 9 ದಿನ ಉಪವಾಸ ಇದ್ದು ಬಿಲ್ಲನ್ನೇರಿ ಕಾರ್ಣಿಕ ನುಡಿಯುತ್ತಾರೆ. 'ಆಕಾಶದತ್ತ ಚಿಗುರಿತಲೆ' ಎಂದರೆ ಒಳ್ಳೆ ಮಳೆ ಆಗುತ್ತೆ, 'ಬೇರೆಲ್ಲ ಮುದ್ದಾಯಿತಲೇ' ಅಂದರೆ ರೈತರಿಗೆ ಒಳ್ಳೆ ಬೆಳೆ ಬರುತ್ತದೆ, ಅದನ್ನು ತೆಗೆದುಕೊಳ್ಳುವ ಫಲಾನುಭವಿಗಳಿಗೂ ಒಳ್ಳೆಯದಾಗುತ್ತದೆ ಎಂದು ವಿಶ್ಲೇಷಿಸಿದ್ದಾರೆ.

ರಾಜಕೀಯವಾಗಿ ಹೇಳುವುದಾದರೆ, ಆಕಾಶದತ್ತ ಚಿಗುರಿತಲೇ ಎಂದರೆ, ಈಗಿರುವ ನಾಯಕತ್ವ ಆಕಾಶದತ್ತ ಚಿಗುರಿಬಿಟ್ಟಿದೆ, ಬೇರೆಲ್ಲಾ ಮುದ್ದಾಯಿತಲೇ ಎಂದರೆ ಅವರಿಗೆಲ್ಲಾ ಬೆನ್ನೆಲುಬಾಗಿ ನಿಂತಿರುವುದನ್ನು ನೋಡಿರಬಹುದು. ಕಾನೂನು ವ್ಯವಸ್ಥೆಯಲ್ಲಿ ಏನು ಬದಲಾವಣೆ ಆದರೂ ಕೂಡಾ ಈಗಿರುವ ನಾಯಕತ್ವ ಹೇಳಿದ ಹಾಗೆ ಅವರು ಒಪ್ಪಿಕೊಳ್ಳುತ್ತಾರೆ ಎಂದು ಹೇಳಬಹುದು. ಅಂದರೆ ಆಕಾಶದತ್ತ ಚಿಗುರಿರುವ ಗಿಡ ಹೇಳಿದ ಹಾಗೆ ಬೇರುಗಳು ಒಪ್ಪಿಕೊಳ್ಳುತ್ತವೆಂದು ವಿಶ್ಲೇಷಿಸಬಹುದು ಎಂದು ಹೇಳಿದ್ದಾರೆ.

## ವಿದ್ಯಾಧರ ಶೀಲವಂತಗೆ ಪಿಎಚ್.ಡಿ

■ ವಿಜಯಸಾಕ್ಷಿ ಸುದ್ದಿ, ಗದಗ



ಕನ್ನಡ ವಿಶ್ವವಿದ್ಯಾಲಯ ವಿದ್ಯಾರಣ್ಯ ಹಂಪಿ ಅಭಿವೃದ್ಧಿ ಅಧ್ಯಯನ ವಿಭಾಗಕ್ಕೆ ವಿದ್ಯಾಧರ ವಿರೇಂದ್ರ ಶೀಲವಂತ ಅವರು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಬರೆದು ಮಂಡಿಸಿದ 'ಎಣ್ಣೆ ಬೀಜಗಳ ಬೆಳೆ ಮತ್ತು ಮಾರಾಟ' ಮಹಾಪ್ರಬಂಧಕ್ಕೆ ಕನ್ನಡ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ನೀಡಿ ಗೌರವಿಸಿದೆ.

ಕನಕದಾಸ ಶಿಕ್ಷಣ ಸಮಿತಿಯ ಕೆ.ಎಸ್.ಎಸ್. ಕಲಾ, ವಾಣಿಜ್ಯ, ವಿಜ್ಞಾನ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದ ಮಾಜಿ ಪ್ರಾಚಾರ್ಯರಾದ ಡಾ. ಟಿ.ಎನ್. ಗೋಡಿ ಅವರು ಮಾರ್ಗದರ್ಶನ ಮಾಡಿದ್ದಾರೆ. ಅವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳು, ಕುಲಸಚಿವರು, ಅಭಿವೃದ್ಧಿ ಅಧ್ಯಯನ ವಿಭಾಗದ ಮುಖ್ಯಸ್ಥರು, ಪ್ರಾಧ್ಯಾಪಕರು ವಿದ್ಯಾಧರ ಶೀಲವಂತ ಅವರ ಅಭಿಮಾನಿಗಳು, ಡಾ. ಟಿ.ಎನ್. ಗೋಡಿಯವರು ಪ್ರಶಂಸಿಸಿ ಅಭಿನಂದಿಸಿದ್ದಾರೆ.

ಡಾ. ವಿದ್ಯಾಧರ ಶೀಲವಂತ ಅವರು ಪ್ರಸ್ತುತ ಬೀಳಗಿಯ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ.

### ತಮ್ಮದೇ ಸರ್ಕಾರದ ವಿರುದ್ಧ ಹರಿಹಾಯ್ದ ಕೈ ಶಾಸಕ

# ರೈತರ ಪರ ಯಾವುದೇ ಯೋಜನೆಗಳು ಬರ್ತಿಲ್ಲ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ರೈತರ ಪರ ಯಾವುದೇ ಯೋಜನೆಗಳು ಬರ್ತಿಲ್ಲ ಎಂದು ತಮ್ಮದೇ ಸರ್ಕಾರದ ವಿರುದ್ಧ ಶಾಸಕ ರಾಜು ಕಾಗೆ ಕಿಡಿಕಾರಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ರೈತರು ಒಂದು ವರ್ಷ ಬೆಳೆಗಳನ್ನು ಬೆಳೆಯುವುದನ್ನು ಬಿಟ್ಟರೇ ನೀವೇನು ತಿಂತೀರೀ..? ನಿಮ್ಮ ಬಳಿ ರೊಕ್ಕ, ಬಂಗಾರ ಬೆಳ್ಳಿ ಸಾಕಷ್ಟು ಇರಬಹುದು, ಆದ್ರೆ ಅದನ್ನ ತಿನ್ನೋಕಾಗುತ್ತಾ..? ಮೊದಲು ರೈತರನ್ನು ಬದುಕಿಸುವ ಕೆಲಸ ಮಾಡಿ



ಎಂದು ತಮ್ಮದೇ ಸರ್ಕಾರದ ವಿರುದ್ಧ ಹರಿಹಾಯ್ದರು.

ಇನ್ನೂ ಕಳೆದ ಒಂದು ವರ್ಷದಿಂದ ನನ್ನ ಗೋಳನ್ನು ಸರ್ಕಾರ ಆಲಿಸುತ್ತಿಲ್ಲ. ಹೀಗೆ ಪರಿಸ್ಥಿತಿ ಮುಂದುವರೆದ್ರೆ ವಿಧಾನಸೌಧದಲ್ಲಿಯೇ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಓರ್ವ ಮಂತ್ರಿಗೆ ಹೇಳಿದ್ದೆ, ನೀನ್ಯಾಕೆ ಆತ್ಮಹತ್ಯೆ ಮಾಡಿಕೊಳ್ತಿಯಾ, ನಿನ್ನ ಕೆಲಸ ಮಾಡ್ತಿವಿ ಅಂತ ಹೇಳಿದ ಮಂತ್ರಿಗಳಿದ್ದಾರೆ ಎಂದು ಕಿಡಿಕಾರಿದರು.

ನಾವೇನು ವಿಧಾನಸೌಧಕ್ಕೆ ಹೋಗಿ ಖಾಲಿ ಕುಂತಿಲ್ಲ, ರೈತರ ಕಷ್ಟ ಸುಖಗಳನ್ನು ಸರ್ಕಾರದ ಗಮನ ಸೆಳೆಯುವ ಕೆಲಸ ಮಾಡುತ್ತಿದ್ದೇನೆ. ಆದ್ರೆ ಸರ್ಕಾರದವರು ನಮಗೆ ಸ್ಪಂದನೆ ಮಾಡುತ್ತಿಲ್ಲ. ಅದ್ದರಿಂದ ಏನು ಆಗೋದಿದೆ. ಬೇಕಾದ್ರೆ ನಾನು ನಾಳೆ ಹೋಗಿ ರಾಜೀನಾಮೆ ಕೊಡುತ್ತೇನೆ ಎಂದು ಎಚ್ಚರಿಕೆ ನೀಡಿದರು.

## ಅಪರಾಧ ಮಾಡಿದವರನ್ನು ಬಿಡುಗಡೆ ಮಾಡುವ ಯೋಚನೆ ಸರ್ಕಾರಕ್ಕಿಲ್ಲ

■ ವಿಜಯಸಾಕ್ಷಿ ಸುದ್ದಿ, ಕೋಲಾರ



ಅಪರಾಧ ಮಾಡಿದವರನ್ನು ಬಿಡುಗಡೆ ಮಾಡುವ ಯೋಚನೆ ಸರ್ಕಾರಕ್ಕಿಲ್ಲ ಎಂದು ಆಹಾರ ಸಚಿವ ಕೆಎಚ್ ಮುನಿಯಪ್ಪ ಹೇಳಿದರು. ಕೋಲಾರದಲ್ಲಿ ಮಾತನಾಡಿದ ಅವರು, ದೊಂಬಿ ಗಲಭೆಗಳಲ್ಲಿ ಸಂಬಂಧವಿಲ್ಲದವರು ಸೇರಿರುತ್ತಾರೆ.

ನೇರವಾಗಿ ಅಪರಾಧ ಮಾಡಿದವರನ್ನು ಬಿಡುಗಡೆ ಮಾಡುವ ಯೋಚನೆ ಸರ್ಕಾರಕ್ಕಿಲ್ಲ ಎಂದರು.

ಇದೇ ವೇಳೆ 'ನಾಗಮಂಗಲ ಪ್ರಕರಣದಲ್ಲೂ ಹೀಗೆ ಆಗಲಿದೆಯೇ?' ಎಂಬ ಮಾಧ್ಯಮದವರ ಪ್ರಶ್ನೆಗೆ, 'ಪೊಲೀಸರ ತನಿಖಾ ವರದಿ ಆಧರಿಸಿ ಮುಂದಿನ ಕ್ರಮ ಆಗಲಿದೆ ಎಂದರು.

ಪತ್ರಿಕೆಗಳಲ್ಲಿ ಬಂದಿರುವ ಸರ್ಕಾರದ ಜಾಹೀರಾತು ವಿವಾದ ವಿಚಾರಕ್ಕೆ ಪ್ರತಿಕ್ರಿಯಿಸಿದ ಸಚಿವರು, ದುಷ್ಟರನ್ನು ಶಿಕ್ಷಿಸಿ ಶಿಷ್ಟರನ್ನು ರಕ್ಷಿಸುವುದು ಚಾಮುಂಡೇಶ್ವರಿ ಹೇಳಿರುವುದು ತಾನೆ? ಸರ್ಕಾರವೂ ಅದನ್ನೆ ಹೇಳಿದೆ, ವಿಪಕ್ಷ ಎಂದು ಏನೂ ಹೇಳಿಲ್ಲ. ಸಮಾಜಕ್ಕೆ ಕೆಟ್ಟದನ್ನ ಬಯಸುವರ ವಿರುದ್ದವೇ ಆ ಜಾಹೀರಾತು ಇದೆ. ಪಕ್ಷವನ್ನು ಹೆಸರಿಸಿಲ್ಲ ಎಂದರು.

## ಗೂಂಡಾಗಿರಿ ಮಾಡಿದವರ ಕೇಸನ್ನು ವಾಪಸ್ ಪಡೆದಿದ್ದು ಸರಿಯಲ್ಲ: ಜಗದೀಶ್ ಶೆಟ್ಟರ್

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಪೊಲೀಸರ ಮೇಲೆ ಹಲ್ಲೆ ಮಾಡಿದವರ ಕೇಸುಗಳನ್ನು ವಾಪಸ್ ಪಡೆದಿದ್ದು ಸರಿಯಲ್ಲ ಎಂದು ಸಂಸದ ಜಗದೀಶ್ ಶೆಟ್ಟರ್ ಕಿಡಿಕಾರಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಬೇರೆ ಬೇರೆ ಸರ್ಕಾರಗಳು ಅಧಿಕಾರದಲ್ಲಿದ್ದಾಗ ಕೇಸ್ ವಾಪಸ್ ಪಡೆಯುವುದು ಸಹಜ. ರೈತರ ಹೋರಾಟದ ಕೇಸ್‌ಗಳನ್ನು ವಾಪಸ್ ಪಡೆದರೆ ಸರಿ. ಆದರೆ ಪೊಲೀಸ್ ಠಾಣೆ ಮೇಲೆ ದಾಳಿ ನಡೆಸಿ, ಪೊಲೀಸರ ಮೇಲೆ ಹಲ್ಲೆ ಮಾಡಿದವರ ಕೇಸುಗಳನ್ನು ವಾಪಸ್ ಪಡೆದಿದ್ದು ಸರಿಯಲ್ಲ. ಇದು ಕಾನೂನು ಮತ್ತು ಸುವ್ಯವಸ್ಥೆ ಹದಗೆಡಲು ಬೆಂಬಲ ನೀಡಿದಂತಾಗುತ್ತದೆ ಎಂದರು.

ಈ ಬಗ್ಗೆ 'ಕೈ' ಸರ್ಕಾರ ಯೋಚಿಸಬೇಕಿತ್ತು. ಅವರಿಗೆ ಮತ್ತಷ್ಟು ಪ್ರೋತ್ಸಾಹ ಕೊಡಲು ಈ ರೀತಿ ಮಾಡಲಾಗುತ್ತಿದೆ. ಇದರಿಂದ ಕಾನೂನು ಮತ್ತು ಸುವ್ಯವಸ್ಥೆ ಮತ್ತಷ್ಟು ಹದಗೆಡುತ್ತದೆ. ಈ ನಿರ್ಧಾರ ಕಾನೂನಿನಡಿ ಎಷ್ಟು ನಿಲ್ಲುತ್ತದೆಯೋ ಗೊತ್ತಿಲ್ಲ. ಕೇಸಿನ ಫೈಲ್ ನೋಡಿದರೆ ಆ ಕೇಸನ್ನು ವಾಪಸ್ ಪಡೆಯಲು ಬರುವುದಿಲ್ಲ. ಆದರೂ ಕ್ಯಾಬಿನೆಟ್‌ನಲ್ಲಿ ಕೇಸ್ ವಾಪಸ್ ಪಡೆಯಲು ಒಪ್ಪಿಗೆ ನೀಡಲಾಗಿದೆ.

ಇದು ಕಾನೂನು ಬಾಹಿರ. ಕೋರ್ಟ್‌ನಲ್ಲಿ ಯಾರಾದರೂ ಇದನ್ನು ಪ್ರಶ್ನಿಸಿದರೆ ಸರ್ಕಾರದ ನಿರ್ಧಾರ ಕೋರ್ಟ್‌ನಲ್ಲಿ ನಿಲ್ಲೋದಿಲ್ಲ. ಇದು ಅಲ್ಪಸಂಖ್ಯಾತರ ತುಷ್ಟೀಕರಣ ಎಂದು ಹೇಳಿದರು.


## ಸೋರುತ್ತಿರೋ ಬಸ್‌ನಲ್ಲಿ ಕೊಡೆ ಹಿಡಿದು ಪ್ರಯಾಣಿಸಿದ ಪ್ರಯಾಣಿಕರ..!

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಡಕೋಟಾ ಬಸ್‌ಗಳ ಹಾವಳಿ ಜೋರಾಗಿದ್ದು, ಪ್ರಯಾಣಿಕರು ಹೈರಾಣಾಗಿ ಹೋಗಿದ್ದಾರೆ.

ಮಳೆಯಲ್ಲಿ ಸೋರುತ್ತಿರೋ ಸರ್ಕಾರಿ ಬಸ್ ನಲ್ಲಿ ಪ್ರಯಾಣ ಮಾಡುತ್ತಿರುವ ಜನರ ಪರದಾಟ ಹೇಳತ್ತೀರದ್ದಾಗಿದೆ. ಎಸ್, ಗದಗ–ಮುಂಡರಗಿ ಸರ್ಕಾರಿ ಬಸ್ ಸಂಪೂರ್ಣ ಮೇಲ್ಛಾವಣಿ ಸೋರಿಕೆ ಆಗುತ್ತಿದ್ದು ಬಸ್ ನಲ್ಲಿ ಕೊಡೆ ಹಿಡಿದು ಪ್ರಯಾಣಿಕರು ಪ್ರಯಾಣ ಮಾಡುವ ಸ್ಥಿತಿ ಬಂದಿದೆ.

ಕೊಡೆ ಇಲ್ಲದ ಬಹುತೇಕ ಪ್ರಯಾಣಿಕರ ಮೈಎಲ್ಲಾ ಒದ್ದೆ



ಆಗಿದೆ. ಇನ್ನೂ ನಿನ್ನೆ ಸಂಜೆ ಸುರಿದ ಭಾರಿ ಮಳೆಗೆ ಬಸ್ ಮೇಲ್ಛಾವಣಿ ಸೋರಿಕೆಯಿಂದ ಪ್ರಯಾಣಿಕರು ಒದ್ದಾಡಿದ್ದಾರೆ.

ಈ ಮೂಲಕ ಗದಗ ಜಿಲ್ಲೆಯಲ್ಲಿ ಮತ್ತೆ ಡಕೋಟಾ ಬಸ್ ಮುಖವಾಡ ಬಯಲಾಗಿದ್ದು, ಸಾರಿಗೆ ಇಲಾಖೆ ವಿರುದ್ಧ ಪ್ರಯಾಣಿಕರು ಆಕ್ರೋಶ ಹೊರ ಹಾಕಿದ್ದಾರೆ.

ನಮ್ಮ ಸರ್ಕಾರದ ವ್ಯವಸ್ಥೆ ಇಂಥ ಕೆಟ್ಟ ವ್ಯವಸ್ಥೆ ಅಂತ ಪ್ರಯಾಣಿಕರು ಕಿಡಿಕಾರಿದ್ದಾರೆ.

## ರಾಜಕೀಯ ಪ್ರೇರಿತ 43 ಕ್ರಿಮಿನಲ್ ಕೇಸ್ ವಾಪಸ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ರಾಜಕೀಯ ಪ್ರೇರಿತವಾಗಿ ದಾಖಲಿಸಿದ್ದ ಕೇಸ್ ವಾಪಸ್ ತೆಗೆದುಕೊಂಡಿದ್ದೇವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ನಗರದಲ್ಲಿ ಮಾತನಾಡಿದ ಅವರು, ರಾಜಕೀಯ ಪ್ರೇರಿತವಾಗಿ ದಾಖಲಿಸಿದ್ದ ಕೇಸ್ ವಾಪಸ್ ತೆಗೆದುಕೊಂಡಿದ್ದೇವೆ. ಕೆಲವು ಕೇಸ್‌ಗಳನ್ನು ಚರ್ಚೆ ಮಾಡಿ ವಾಪಸ್ ತೆಗೆದುಕೊಂಡಿದ್ದೇವೆ.

ಗಲಭೆ ಪ್ರಕರಣಗಳಲ್ಲಿ ಇತರೆ ಆರೋಪಿಗಳು ಎಂದು ಸೇರಿಸಿರುತ್ತಾರೆ. ಹೀಗಾಗಿ ಅದರ ತನಿಖೆ ಮಾಡಿ ಪ್ರಕರಣಗಳನ್ನು ಹಿಂಪಡೆದಿದ್ದೇವೆ. ಇದರಲ್ಲಿ ಯಾವುದೇ ರಾಜಕೀಯ ಇಲ್ಲ ಎಂದರು.

ಇನ್ನೂ ಸಿ.ಟಿ ರವಿ ಅವರ ಪ್ರಕರಣವನ್ನು ವಾಪಸ್ ತೆಗೆದುಕೊಂಡಿದ್ದೇವೆ. ಇದು ರಾಜಕೀಯ ಅಂತಾ ಅವರು ಹೇಳ್ತಾರಾ? ಹೇಳಲಿ ಅವರಿಗೆ ಏನು ಶಿಕ್ಷೆ ಆಗಬೇಕು ಆಗಲಿ. ಎಲ್ಲ ಕೇಸ್ ಪರಿಶೀಲನೆ ಮಾಡಲಾಗಿದೆ. ಸ್ಥಳೀಯರಿಂದ ಮಾಹಿತಿ ಪಡೆದು ಬಿ ರಿಪೋರ್ಟ್ ಹಾಕುತ್ತಿದ್ದೇವೆ ಎಂದು ಸರ್ಕಾರದ ನಿರ್ಧಾರವನ್ನ ಸಮರ್ಥನೆ ಮಾಡಿಕೊಂಡರು.

## ನವೆಂಬರ್ 1 ರಂದು ಎಲ್ಲಾ ಕಂಪನಿ, ಶಿಕ್ಷಣ ಕೇಂದ್ರಗಳಲ್ಲಿ ಕರ್ನಾಟಕ ಧ್ವಜಾರೋಹಣ ಕಡ್ಡಾಯ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಐಟಿ-ಬಿಟಿ ಕಂಪನಿಗಳು, ಕಾರ್ಖಾನೆಗಳು, ಖಾಸಗಿ ಸಂಸ್ಥೆಗಳು ಮತ್ತು ಶಿಕ್ಷಣ ಸಂಸ್ಥೆಗಳು ನವೆಂಬರ್ 1 ರಂದು ಕರ್ನಾಟಕ ರಾಜ್ಯೋತ್ಸವ ಆಚರಿಸುವಂತೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಕ್ರವಾರ ಆದೇಶಿಸಿದ್ದಾರೆ. ಮುಂದಿನ ಪೀಳಿಗೆಗೆ ಕನ್ನಡ ಭಾಷೆಯ ಮಹತ್ವವನ್ನು ತಿಳಿಸಲು ಸರಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಅವರು ಹೇಳಿದ್ದಾರೆ.


ಬೆಂಗಳೂರು ನಗರದಲ್ಲಿ 50%ದಷ್ಟು ಜನ ಹೊರ ರಾಜ್ಯದವರಾಗಿದ್ದು, ಅವರಿಗೆ ಕನ್ನಡ ಕಲಿಯಲು ಅವಕಾಶ ನೀಡಬೇಕು. ಇದನ್ನು ಗಮನದಲ್ಲಿಟ್ಟುಕೊಂಡು ವಿಜಯದಶಮಿ ದಿನದಂದು ಈ ನಿರ್ಧಾರವನ್ನು ಪ್ರಕಟಿಸುತ್ತಿದ್ದೇನೆ ಎಂದು ಉಪ ಮುಖ್ಯಮಂತ್ರಿ ತಿಳಿಸಿದ್ದಾರೆ.

ಐಟಿ-ಬಿಟಿ ಕಂಪನಿಗಳು ಮತ್ತು ಕಾರ್ಖಾನೆಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸದಿದ್ದರೂ ಕನ್ನಡ ಧ್ವಜಾರೋಹಣ ಮಾಡುವ ಮೂಲಕ ರಾಜ್ಯೋತ್ಸವವನ್ನು ಆಚರಿಸಬೇಕು. ರಾಜ್ಯೋತ್ಸವವನ್ನು ಆಚರಿಸುವ ಸಂಸ್ಥೆಗಳು ಬಿಬಿಎಂಪಿ ಒದಗಿಸಿದ ಸಂಖ್ಯೆಗೆ ವಾಟ್ಸಾಪ್ ಮೂಲಕ ಫೋಟೋಗಳನ್ನು ಕಳುಹಿಸಬೇಕಾಗುತ್ತದೆ ಎಂದು ಅವರು ಹೇಳಿದ್ದಾರೆ.

"ಈ ವರ್ಷ 70 ನೇ ಕರ್ನಾಟಕ ರಾಜ್ಯೋತ್ಸವವನ್ನು ರಾಜ್ಯಾದ್ಯಂತ ಆಚರಿಸಲಾಗುತ್ತದೆ. ಕನ್ನಡ ನಾಡಿನಲ್ಲಿ ಕನ್ನಡ ಕಲಿಯುವುದು ಪ್ರತಿಯೊಬ್ಬರ ಕರ್ತವ್ಯ. ಬೆಂಗಳೂರು ಉಸ್ತುವಾರಿ ಸಚಿವನಾಗಿ ನಾನು ಈ ನಿರ್ಧಾರವನ್ನು ಪ್ರಕಟಿಸುತ್ತಿದ್ದೇನೆ" ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

"ಕರ್ನಾಟಕ ರಾಜ್ಯೋತ್ಸವವನ್ನು ಎಲ್ಲ ಸಂಘಟನೆಗಳು ಆಚರಿಸಬೇಕು ಎಂದು ಸರ್ಕಾರ ಆದೇಶ ಹೊರಡಿಸಿದೆ. ಯಾವುದೇ ಕನ್ನಡ ಪರ ಸಂಘಟನೆಗಳು ಅಥವಾ ಇತರರು ಆಚರಣೆಗೆ ಸಂಬಂಧಿಸಿದಂತೆ ಯಾವುದೇ ಸಂಘಟನೆಗೆ ಬೆದರಿಕೆ ಅಥವಾ ತೊಂದರೆ ನೀಡುವಂತಿಲ್ಲ, ಯಾವುದೇ ಗೊಂದಲ ಉಂಟಾದರೆ ಕ್ರಮ ಕೈಗೊಳ್ಳಲಾಗುವುದು" ಎಂದು ಅವರು ಹೇಳಿದ್ದಾರೆ.

## ಜಪಾನ್‌ನ 'ನಿಹಾನ್ ಹಿಡಾಂಕ್ಯೊ' ಸಂಸ್ಥೆಗೆ ನೊಬೆಲ್ ಶಾಂತಿ ಪ್ರಶಸ್ತಿ




■ ವಿಜಯಸಾಕ್ಷಿ ಸುದ್ದಿ, ಹಿರೋಷಿಮಾ

ಹಿರೋಷಿಮಾ ಮತ್ತು ನಾಗಸಾಕಿಯ ಪರಮಾಣು ಬಾಂಬ್ ದಾಳಿಯಲ್ಲಿ ಬದುಕುಳಿದವರನ್ನು ಪ್ರತಿನಿಧಿಸುವ ಜಪಾನಿನ ಸಂಘಟನೆಯಾದ 'ನಿಹಾನ್ ಹಿಡಾಂಕ್ಯೊ'ಗೆ 2024ರ ನೊಬೆಲ್ ಶಾಂತಿ ಪ್ರಶಸ್ತಿ ಘೋಷಣೆಯಾಗಿದೆ.

ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ನೀಡಿರುವ ನೊಬೆಲ್ ಸಮಿತಿ "ನಾರ್ವೇಜಿಯನ್ ನೊಬೆಲ್ ಸಮಿತಿಯು 2024ರ 'ನೊಬೆಲ್ ಶಾಂತಿ ಪ್ರಶಸ್ತಿ'ಯನ್ನು ಜಪಾನಿನ ಸಂಸ್ಥೆ 'ನಿಹಾನ್ ಹಿಡಾಂಕ್ಯೊ'ಗೆ ನೀಡಲು ನಿರ್ಧರಿಸಿದೆ. ಹಿರೋಷಿಮಾ ಮತ್ತು ನಾಗಾಸಾಕಿಯ ಪರಮಾಣು ಬಾಂಬ್ ದಾಳಿಯಲ್ಲಿ ಬದುಕುಳಿದವರ ಈ ತಳಮಟ್ಟದ ಚಳವಳಿಯನ್ನು 'ಹಿಬಾಕುಶಾ' ಎಂದೂ ಕರೆಯಲಾಗುತ್ತದೆ. ಪರಮಾಣು ಶಸ್ತ್ರಾಸ್ತ್ರಗಳಿಂದ ಮುಕ್ತವಾದ ಜಗತ್ತನ್ನು ಸಾಧಿಸುವ ತನ್ನ ಪ್ರಯತ್ನಗಳಿಗಾಗಿ ಮತ್ತು ಪರಮಾಣು ಶಸ್ತ್ರಾಸ್ತ್ರಗಳನ್ನು ಎಂದಿಗೂ ಬಳಸಬಾರದು ಎಂದು ಮಾಡುತ್ತಿರುವ ಕಾರ್ಯಗಳಿಗಾಗಿ ನಿಹಾನ್ ಹಿಡಾಂಕ್ಯೊ ಶಾಂತಿ ಬಹುಮಾನವನ್ನು ಪಡೆಯುತ್ತಿದೆ" ಎಂದು ತಿಳಿಸಿದೆ.

1956ರಲ್ಲಿ ರೂಪುಗೊಂಡ 'ನಿಹಾನ್ ಹಿಡಾಂಕ್ಯೊ' ಜಪಾನ್‌ನಲ್ಲಿ ಪರಮಾಣು ಬಾಂಬ್ ದಾಳಿಯಲ್ಲಿ ಬದುಕುಳಿದವರ ಅತಿದೊಡ್ಡ ಮತ್ತು ಅತ್ಯಂತ ಪ್ರಭಾವಶಾಲಿ ಸಂಸ್ಥೆಯಾಗಿದೆ. ಪರಮಾಣು ಶಸ್ತ್ರಾಸ್ತ್ರಗಳ ಬಳಕೆ ಮಾನವ ಜಗತ್ತಿನ ಮೇಲೆ ಬೀರುವ ಪರಿಣಾಮಗಳ ಬಗ್ಗೆ ಜಾಗತಿಕ ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದೆ.

ಆಗಸ್ಟ್ 1945ರ ಪರಮಾಣು ದಾಳಿಯಲ್ಲಿ ಬದುಕುಳಿದವರು ತಾವು ಅನುಭವಿಸಿದ ವಿನಾಶದ ವೈಯಕ್ತಿಕ ಕಥೆಗಳನ್ನು ಹಂಚಿಕೊಳ್ಳುವ ಮೂಲಕ, ಪರಮಾಣು ಶಸ್ತ್ರಾಸ್ತ್ರಗಳ ಬಳಕೆಯು ನೈತಿಕವಾಗಿ ಸ್ವೀಕಾರಾರ್ಹವಲ್ಲ ಎಂದು ಪ್ರಬಲವಾಗಿ ವಾದಿಸುತ್ತಾರೆ. ಅಂತಾರಾಷ್ಟ್ರೀಯ 'ಪರಮಾಣು ನಿಷೇಧ' ವನ್ನು ರೂಪಿಸಲು ಹಿಬಾಕುಶಾ ನಿಹಾನ್ ಹಿಡಾಂ-ಕ್ಯೊ ಅಥವಾ ಹಿಬಾಕುಶಾ ಕೆಲಸ ಮಾಡುತ್ತಿದೆ.

ನವರಾತ್ರಿ, ದಸರಾ ಹಬ್ಬದ ಆಚರಣೆಯ ಧಾರ್ಮಿಕ, ಐತಿಹಾಸಿಕ ಹಿನ್ನೆಲೆಯ ಕಿರುನೋಟ

# ನಾಡ ಹಬ್ಬದ ಸೊಬಗು

ಸಾಂಸ್ಕೃತಿಕವಾಗಿ, ಸಾಹಿತ್ಯಿಕವಾಗಿ, ಭಾವನಾತ್ಮಕವಾಗಿ ಮತ್ತು ಸಾಮಾಜಿಕವಾಗಿ ನಮ್ಮ ಜನಮಾನಸದಲ್ಲಿ ಬೆರೆತು ಹೋಗಿರುವುದು ನಮ್ಮ ನಾಡ ಹಬ್ಬ ದಸರಾ. ದಸರಾ ನಮ್ಮೆಲ್ಲರ ಭಕ್ತಿ ಭಾವದ ವ್ಯಕ್ತ ರೂಪ. ದಸರಾ ಶಕ್ತಿ-ಶೌರ್ಯಗಳ ವಿಶ್ವ ರೂಪ. ನಾಡು-ನುಡಿಗಳ ಮೀರಿ ನಮ್ಮೆಲ್ಲರನ್ನು ಒಗ್ಗೂಡಿಸುವ ಶಕ್ತಿ ರೂಪ.

ಹಿಂದೆ ಅಜ್ಞಾತವಾಸದಲ್ಲಿದ್ದ ಪಾಂಡವರು ಬನ್ನಿ ಗಿಡದ ಕೆಳಗೆ ಹುಗಿದಿಟ್ಟಿದ್ದ ತಮ್ಮ ಶಸ್ತ್ರಾಸ್ತ್ರಗಳನ್ನು ಹೊರತೆಗೆದು ಪೂಜೆ ಮಾಡಿ ದುಷ್ಟರ ವಿರುದ್ಧ ಹೋರಾಡಿ ವಿಜಯ ಪ್ರಾಪ್ತಿಗೊಳಿಸಿಕೊಂಡ ಸಮಯ ಈ ವಿಜಯ ದಶಮಿ. ದುಷ್ಟನಾದ ರಾಕ್ಷಸೇಂದ್ರ ರಾವಣನನ್ನು ರಾಮನು ಸಂಹರಿಸಿದ ದಿನ ಈ ವಿಜಯದಶಮಿ.

ತಾಯಿ ಚಾಮುಂಡೇಶ್ವರಿ ದುಷ್ಟ ಮಹಿಶಾಸುರನೊಡನೆ 9 ದಿನಗಳ ಕಾಲ ಕಾದಾಡಿ ಹತ್ತನೆಯ ದಿನ ಆತನನ್ನು ವಧಿಸಿದ ದಿನ. ಇವೆಲ್ಲ ಪೌರಾಣಿಕ ಹಿನ್ನೆಲೆಗಳು. ವಿಜಯನಗರದ ಅರಸರು ನಾಡಹಬ್ಬವಾಗಿ ದಸರಾ ಇಲ್ಲವೇ ನವರಾತ್ರಿ ಎಂದು ಕರೆಯಲ್ಪಡುವ ಈ ಹಬ್ಬವನ್ನು ಆಚರಿಸುತ್ತಿದ್ದರು. ಮುಂದೆ ವಿಜಯನಗರ ಸಾಮ್ರಾಜ್ಯದ ಕೊನೆಯ ಅರಸು ರಾಮರಾಯನು ಯುದ್ಧದಲ್ಲಿ ಸೋತು 1565ರಲ್ಲಿ ಮೈಸೂರಿಗೆ ವಲಸೆ ಹೋದನು. ಅಂದಿನಿಂದ ಒಡೆಯರ್ ವಂಶದ ಮೈಸೂರು ಮಹಾರಾಜರು ಈ ನವರಾತ್ರಿ ಹಬ್ಬವನ್ನು ನಾಡಹಬ್ಬವಾಗಿ ಆಚರಿಸಿದರು.

ಸ್ವಾತಂತ್ರ್ಯದ ಹೋರಾಟ ಸಮಯದಲ್ಲಂತೂ ಈ ನಾಡ ಹಬ್ಬ ಮತ್ತಷ್ಟು ಮೆರುಗನ್ನು ಪಡೆಯಿತು. ನೆರೆಯ ಮಹಾರಾಷ್ಟ್ರದಲ್ಲಿ ಗಣಪತಿ ಹಬ್ಬವನ್ನು ಆಚರಿಸುತ್ತಾ ಸ್ವಾತಂತ್ರ್ಯ ಪಡೆಯುವ ಕಿಚ್ಚಿಗೆ ಪ್ರೋತ್ಸಾಹ ನೀಡುವ ಪ್ರಕ್ರಿಯೆಯನ್ನು ಕಂಡ ಕರ್ನಾಟಕದ ಸಣ್ಣಪುಟ್ಟ ರಾಜರು, ಆಳರಸರು ನವರಾತ್ರಿ ಹಬ್ಬವನ್ನು ಇನ್ನಷ್ಟು ವಿಜೃಂಭಣೆಯಿಂದ ಆಚರಿಸತೊಡಗಿದರು. ಮೈಸೂರಿನ ದೊರೆಗಳು ಸ್ವಾತಂತ್ರ್ಯದ ನಂತರ ದೈವಾರಾಧನೆ ಮಾಡುತ್ತಾ, ಖಾಸಗಿಯಾಗಿ ದರ್ಬಾರನ್ನು ನಡೆಸುತ್ತಾ ಸಾರ್ವಜನಿಕವಾಗಿ ಜಂಬೂ ಸವಾರಿಯನ್ನು, ತನ್ಮೂಲಕ ಮೈಸೂರು ದಸರೆಯನ್ನು ಅದ್ದೂರಿಯಾಗಿ ಆಚರಿಸುತ್ತಾರೆ.

ಅಂದು ಮಹಾರಾಜರು ಜಂಬೂ ಸವಾರಿಯಲ್ಲಿ ಆನೆಯ ಮೇಲೆ ಏರುತ್ತಿದ್ದರೆ, ಇಂದು ತಾಯಿ ಚಾಮುಂಡಿ ದೇವಿಯನ್ನು ಪಟ್ಟದ ಆನೆಯ ಮೇಲೆ ಪ್ರತಿಷ್ಠಾಪಿಸಿ ಅರಮನೆಯ ಬನ್ನಿಮಂಟಪದವರೆಗೆ ಭವ್ಯ ಮೆರವಣಿಗೆಯಲ್ಲಿ ಕೊಂಡೊಯ್ದು ಶಮೀವೃಕ್ಷವನ್ನು ಪೂಜಿಸಿ ಬನ್ನಿಯನ್ನು ಮುಡಿಯುತ್ತಾ ವಿಜಯದಶಮಿಯನ್ನು ಆಚರಿಸುತ್ತಾರೆ.



ಈ ವಿಜಯದಶಮಿಯಂದು 'ದುಷ್ಟ ಶಿಕ್ಷಣ-ಶಿಷ್ಟ ರಕ್ಷಣ' ಎಂಬ ಧ್ಯೇಯ ಎಲ್ಲೆಡೆ ಮೊಳಗುವಂತೆ ಮಾಡುತ್ತಾರೆ.

ಮಹಾನವಮಿ ಅಮಾವಾಸ್ಯೆಯ ನಂತರ ಬರುವ ಅಶ್ವಿಜ ಮಾಸದ ಮೊದಲನೆಯ ದಿನವೇ ಘಟಸ್ಥಾಪನೆ. ಪದ್ಧತಿ ಇರುವ ಎಲ್ಲಾ ಧರ್ಮಗಳಲ್ಲಿಯೂ ಕಳಶವನ್ನು ತುಂಬಿ ಅದರ ಮೇಲೆ ಎಲೆ, ಸಿಪ್ಪೆಯ ತೆಂಗಿನಕಾಯಿಯನ್ನು ಇರಿಸಿ ದೇವಿಯನ್ನು ಪ್ರತಿಷ್ಠಾಪಿಸಿ ಪೂಜಿಸುತ್ತಾರೆ. ಇನ್ನೂ ಕೆಲವರು ಮಣ್ಣಿನಲ್ಲಿ 9 ವಿಧದ ಧಾನ್ಯಗಳನ್ನು ಹಾಕಿ ಅದಕ್ಕೆ ನೀರು ಚಿಮುಕಿಸಿ ಅದರ ಮೇಲೆ ಒಂದು ಮಣ್ಣಿನ ಕೊಡವನ್ನು ಕಳಸದಂತೆ ಪ್ರತಿಷ್ಠಾಪಿಸುತ್ತಾರೆ. ಈ ನವಧಾನ್ಯಗಳು ಮೊಳಕೆ ಒಡೆದು ಕಳಸದ ಸುತ್ತ ಬೆಳೆಯುತ್ತವೆ. ದೇವರ ಮುಂದೆ ದೊಡ್ಡ ನಂದಾದೀಪವನ್ನು ಹಚ್ಚಿಟ್ಟು ಅದನ್ನು ನವರಾತ್ರಿಯ/ದಸರೆಯವರೆಗೂ ನಂದದಂತೆ ಕಾಯುತ್ತಾರೆ.

ಹೀಗೆ ಘಟಸ್ಥಾಪನೆ ಮಾಡಿದ ನಂತರ ಶ್ರೀದೇವಿಯನ್ನು ಆಹ್ವಾನಿಸಿ ಪೂಜಿಸಿ ಷೋಡಶೋಪಚಾರ ಮಾಡಿ ನೈವೇದ್ಯ ಮಾಡುತ್ತಾರೆ. ಕೆಲವರ ಮನೆಗಳಲ್ಲಿ ಕಡ್ಡಾಯವಾಗಿ ದೇವಿ ಪುರಾಣವನ್ನು, ಇನ್ನೂ ಕೆಲವರು ಲಲಿತಾ ಸಹಸ್ರನಾಮಾವಳಿಯನ್ನು ಮತ್ತು ಕೆಲವರು ಶ್ರೀನಿವಾಸ ಕಲ್ಯಾಣವನ್ನು ಪಾರಾಯಣ ಮಾಡುತ್ತಾರೆ. ದೇವಾಲಯಗಳಲ್ಲಿಯೂ ಕೂಡ ದೇವಿಯನ್ನು ಪ್ರತಿಷ್ಠಾಪಿಸಿ 9 ದಿನಗಳವರೆಗೆ ಸತತವಾಗಿ ವಿವಿಧ ದೇವತೆಗಳ ರೂಪದಲ್ಲಿ ಪೂಜಿಸಿ ಗಂಡಾರತಿ ಇಲ್ಲವೇ ಕಾಕಡಾರತಿ ಮೂಲಕ ಭಜಿಸಿ ದೇವಿ ಪುರಾಣವನ್ನು, ಸಪ್ತಶಕ್ತಿ ಪಾರಾಯಣ, ಲಲಿತೋಪಾಖ್ಯಾನ, ದುರ್ಗಾ ಸಪ್ತಶತಿ ಪಾರಾಯಣ ಮಾಡುತ್ತಾರೆ.

ಉತ್ತರ ಭಾರತದಲ್ಲಿ ಸಪ್ತಮಿ, ಅಷ್ಟಮಿ, ನವಮಿ ಮೂರು ದಿನಗಳನ್ನು ಸೇರಿಸಿ ತ್ರಿದಿನ ದುರ್ಗಾಪೂಜೆ ಎಂದು ಪೂಜಿಸುತ್ತಾರೆ. ಸಪ್ತಮಿಯ ದಿನ (ಮೂಲ ನಕ್ಷತ್ರ)ದಂದು ಶಾರದೆಯನ್ನು ಪೂಜಿಸಲು ಬಗೆ ಬಗೆಯ ಪುಸ್ತಕಗಳನ್ನು ಇಟ್ಟು ಪವಿತ್ರ ಗ್ರಂಥಗಳನ್ನು, ಚಿನ್ನ, ಬೆಳ್ಳಿಗಳನ್ನು ಪೂಜಿಸಲಾಗುತ್ತದೆ. ಎಂಟನೆಯ ದಿನದಂದು ಲಕ್ಷ್ಮೀ ಪೂಜೆ ಮಾಡುತ್ತಾರೆ. ನವಮಿಯಂದು ಪಾಂಡವರು ಬನ್ನಿ ವೃಕ್ಷದ ಕೆಳಗೆ ಮುಚ್ಚಿಟ್ಟ ತಮ್ಮ ಸರ್ವ ಶಸ್ತ್ರಾಸ್ತ್ರಗಳನ್ನು ತೆಗೆದು ಪೂಜಿಸಿದ ದಿನ ಅದುವೇ ಆಯುಧ ಪೂಜೆ.

ಇಂದಿನ ದಿನ ಎಲ್ಲರೂ ತಮ್ಮ ತಮ್ಮ ಮನೆಯಲ್ಲಿರುವ ಕತ್ತಿ, ಖಡ್ಗ, ಕಠಾರಿ, ಅಳತೆಯ ಮತ್ತು ತೂಕದ ವಸ್ತುಗಳು, ಕೃಷಿ ಕೆಲಸದ ಸಾಮಗ್ರಿಗಳನ್ನು ಇಟ್ಟು ಪೂಜಿಸುತ್ತಾರೆ. ನವರಾತ್ರಿಯ ಅಥವಾ ದಸರೆಯ ಕೊನೆಯ ದಿನ ವಿಜಯದಶಮಿ. ಅಂದು ತಾಯಿ ಚಾಮುಂಡಿಯು ದುಷ್ಟ ಮಹಿಶಾಸುರನನ್ನು ಕೊಂದ ದಿನ, ರಾಮ ರಾವಣನನ್ನು ವಧಿಸಿದ ದಿನ. ಈ ದಿನದ ನೆನಪಿಗಾಗಿ ವಿಜಯದಶಮಿಯನ್ನು ಆಚರಿಸುವರು. ವಿಜಯದಶಮಿಯ ಈ ಹಬ್ಬ ಸ್ತ್ರೀಶಕ್ತಿಯ ಪಾರಮ್ಯವನ್ನು ಸೂಚಿಸುವ ಹಬ್ಬ. ಎಲ್ಲೆಡೆಯು ತಾಯಿ ದುರ್ಗೆಯನ್ನು ಹಲವು ನಾಮಗಳಿಂದ ಕರೆಯುತ್ತಾ ವಿವಿಧ ಬಗೆಗಳಲ್ಲಿ ಪೂಜಿಸುತ್ತಾರೆ. ನವರಾತ್ರಿಯ ನಿಮಿತ್ತ ಕೆಲವರಂತೂ ಇಡೀ ದಿನಕ್ಕೆ ಕೇವಲ ಒಪ್ಪತ್ತಿನ ಊಟವನ್ನು ಮಾಡುತ್ತಾ ಸಂಪೂರ್ಣ ಮೌನಕ್ಕೆ ಶರಣಾಗುತ್ತಾರೆ.

'ಶಮೀ ಶಮಯತೇ ಪಾಪಂ
ಶಮೀ ಶತ್ರು ವಿನಾಶಿನಿ
ಅರ್ಜುನಸ್ಯ ಧನುರ್ಧಾರಿ
ರಮಸ್ಯ ಪ್ರಯವಾದಿನಿ'

ಎಲ್ಲರಿಗೂ ನಾಡ ಹಬ್ಬ ದಸರೆಯ ಶುಭಾಶಯಗಳು.

**- ವೀಣಾ ಹೇಮಂತ್ ಗೌಡ ಪಾಟೀಲ್.**
ಮುಂಡರಗಿ, ಗದಗ.

ಅ.12ರಂದು ಶ್ರೀ ಸಾಯಿಬಾಬಾರ 106ನೇ ಸಮಾಧಿ ಉತ್ಸವದ ನಿಮಿತ್ತ ಲೇಖನ

# ಜಗದ ಬೆಳಕು ಸಾಯಿಬಾಬಾ

ಶ್ರೀ ಶಿರಡಿ ಸಾಯಿಬಾಬಾರು ತಮ್ಮ ಶರೀರವನ್ನು ದಿ. 15-10-1918ರಂದು ಮಧ್ಯಾಹ್ನ 2-30ಕ್ಕೆ ತಾವು ಕೊಟ್ಟ ವಚನದಂತೆ ತಾತ್ಯಾ ಪಾಟೀಲನ ಮರದ ಶಾಸನವನ್ನು ಹಿಂದಕ್ಕೆ ಪಡೆದು ಆ ದಿವಸ ಸಾಯಿಬಾಬಾರೇ ಟವ್ಯಾಜಿ ಕೋಟೆ ಪಾಟೀಲರ ತೊಡೆಯ ಮೇಲೆ ತಮ್ಮ ಶಿರವನ್ನಿಟ್ಟು ಪ್ರಾಣ ತ್ಯಾಗ ಮಾಡಿದರು. ಸಂತ ಶ್ರೀ ಉಪಾಸನಿ ಬಾಬಾರ ನೇತೃತ್ವದಲ್ಲಿ ವಿಧಿವಿಧಾನಗಳೊಂದಿಗೆ ಭೂ ವಾಡಾದಲ್ಲಿ ಸಮಾಧಿ ಮಾಡಲಾಗಿದೆ. ಬಾಬಾ ಇದ್ದಾಗ ಹೇಳಿದಂತೆ ಆ ಜಾಗೆಯಲ್ಲಿ ಮುರಳೀಧರನೇ ಬಂದು ವಾಸ ಮಾಡುತ್ತಾನೆ ಎಂಬ ಮಾತಿನಂತೆ ಸಾಯಿಬಾಬಾರೇ ಸ್ವತಃ ಮುರಳಿಧರನಾಗಿ ವಾಸ ಮಾಡಿದ್ದಾರೆ.

ಇಂದು ಆ ಜಾಗೆ ಸ್ವತಃ ಜಗತ್ಪ್ರಸಿದ್ಧವಾಗಿದೆ ಹಾಗೂ ತೀರ್ಥ ಕ್ಷೇತ್ರವಾಗಿದೆ. ಆ ಜಾಗೆಯಲ್ಲಿ ಸಮಾಧಿ ಮಾತ್ರ ನೋಡಬಹುದಾಗಿದ್ದು, 1954ರಲ್ಲಿ ಇಟಾಲಿಯನ್ ಮಾರ್ಬಲಿನಲ್ಲಿ ಕೆತ್ತಲಾದ ಸಾಯಿಬಾಬಾರ ಸುಂದರ, ಭವ್ಯ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿದೆ. ಆ ಮೂರ್ತಿ ನೋಡಿದರೆ ಆನಂದ ಉಕ್ಕಿ ಬರುವಲ್ಲಿ ಸಂದೇಹವಿಲ್ಲ.

ಅಂದು ಸಾಯಿಬಾಬರೊಂದಿಗೆ ಭಗತ ಮ್ಯಾಳಸಾಪತಿ, ಬಾಪು ಸಾಹೇಬ ಬೂಟಿ, ಬಾಬಾಸಾಹೇಬ ಭಾಟ್, ಸಗಣ ಮೇರು ನಾಯಿಕ, ದಾದಾ ಕೇಳಕರ, ಹೇಮಾಡಪಂತ, ತಾತ್ಯಾ ಪಾಟೀಲ, ಬಾಯಜಾಬಾಯಿ ಇನ್ನೂ ಅನೇಕರು ಇಂದು ಇರದೇ ಹೋದರೂ ಸಹ ಅವರೆಲ್ಲ ಪ್ರಾತಃ ಸ್ಮರಣೀಯರಾಗಿದ್ದಾರೆ. ನಾನು ಶಿರಡಿಗೆ ಹೋಗಿದ್ದು 1973-74ರಲ್ಲಿ. ಸಮಾಧಿ ಮುಂದೆ ನಿಂತು ಆರತಿ ಮಾಡಿದ್ದು, ಸಮಾಧಿ ಪಕ್ಕದಲ್ಲಿ ಕುಳಿತು ಅಭಿಷೇಕ ಮಾಡಿದ್ದು, ಬಾಬರ ಮೂರ್ತಿಗೆ ಹಾರ ಹಾಕಿದ್ದು ಎಂದೂ ಮರೆಯದ ಸಂಗತಿಗಳಾಗಿವೆ. ಅಂದಿನ ದಿನಗಳಲ್ಲಿ ಅಭಿಷೇಕ ಕೇವಲ 0.50 (ಐವತ್ತು ಪೈಸೆ)



ಗಳಾಗಿತ್ತು. ಇಂದು ಬಾಬಾರ ದರ್ಶನ ಮಾಡಿಕೊಳ್ಳುವದು ಸುಲಭದ ಮಾತಾಗಿಲ್ಲ.

ಶ್ರೀ ಸಾಯಿಬಾಬಾರ ಪ್ರಚಾರ ಹೆಚ್ಚಾದಂತೆಲ್ಲ, ಶ್ರೀ ಸಾಯಿ ಮಂದಿರಗಳು ಭಾರತದಲ್ಲಿ ಮತ್ತು ಪ್ರಪಂಚದಾದ್ಯಂತ ಹೆಚ್ಚಾಗುತ್ತಿವೆ. ದಾಸಗಣ ಮಹಾರಾಜರು ತಮ್ಮ ವಾಣಿಯಿಂದ ಮತ್ತು ಕೀರ್ತನೆಗಳೊಂದಿಗೆ ಮೊದಲು ಮಹಾರಾಷ್ಟ್ರ, ನಂತರ ಆರು ದೇಶಾದ್ಯಂತ, ನಂತರ ಪ್ರಪಂಚದಾದ್ಯಂತ ಸಾಯಿಬಾಬಾರ ಕೀರ್ತಿಯು ಹರಡಿದೆ. ತಾವು ಭಿಕ್ಷೆ ಬೇಡಿ ಬಂದದಿದ್ದರಲ್ಲಿ ಊಟ ಮಾಡಿ, ಸಾಧು-ಸಂತರಿಗೆ ಉಣಿಸಿ ಮಿಕ್ಕಿದ್ದನ್ನು ಪ್ರಾಣಿ, ಪಶು, ಪಕ್ಷಿಗಳಿಗೆ ನೀಡಿದವರಾಗಿದ್ದಾರೆ. ತಮಗಾಗಿ ಏನನ್ನೂ ಸಂಗ್ರಹ ಮಾಡದೇ ಸರ್ವಸಂಗ ಪರಿತ್ಯಾಗಿಗಳಾಗಿದ್ದಾರೆ. ಸಾಯಿಬಾಬಾರ ಪರಿಶ್ರಮ ಹಾಗೂ ಸಾಹಸದೊಂದಿಗೆ ಇಂದು ಶಿರಡಿ ಪವಿತ್ರ ತೀರ್ಥ ಕ್ಷೇತ್ರವಾಗಿದೆ. ಪ್ರಪಂಚದಾದ್ಯಂತ ಸಾಯಿಬಾಬಾರ ಕೀರ್ತಿ ಹರಡಿದೆ.

ಗದಗ-ಬೆಟಗೇರಿ ಕ್ಷೇತ್ರದಲ್ಲಿ ಸಾಯಿ ಮಂದಿರ ನೆಲೆನಿಂತಿದ್ದಲ್ಲದೇ 2007ರ ಅಕ್ಷಯ ತೃತಿಯಾದಂದು (ಬಸವ ಜಯಂತಿ) ಸುಂದರ ಸಾಯಿ ಮಂದಿರ ಸಂಗಮರಿ ಕಲ್ಲಿನಿಂದ ಕಟ್ಟಿಸಿದ್ದು, ಅದರಲ್ಲಿ ಸುಂದರವಾದ ಸಂಗಮರಿ ಕಲ್ಲಿನಿಂದ ಮಾಡಿದ ಮೂರ್ತಿ ಕಂಗೊಳಿಸುತ್ತಿದೆ. ಕಳಸಾರೋಹಣ/ಸಾಯಿಗೋಪುರ, ಬೆಳ್ಳಿಯ ಪ್ರಭಾವಳಿ, ಪಾಲಕಿ ಉತ್ಸವ, ಅಡಿಗೆ ಕೋಣೆ, ಅರ್ಚಕರ ವಾಸ್ತವ್ಯಕ್ಕೆ ವ್ಯವಸ್ಥೆ, ಕಳಸಾಪೂರ ರೋಡಿನಲ್ಲಿ ಸಾಯಿಜ್ಞಾನಯೋಗಾಶ್ರಮ ಮತ್ತು ವಿದ್ಯಾರ್ಥಿನಿಯರ ಹಾಸ್ಟೆಲ್ ಹೀಗೆ ಎಲ್ಲವೂ ಪ್ರಗತಿಯಲ್ಲಿವೆ ಎಂಬ ಹೆಮ್ಮೆ ನಮ್ಮದಾಗಿದೆ. ಬನ್ನಿ ನಾವೆಲ್ಲರೂ ಸೇರಿ ಸಾಯಿಬಾಬಾರ 106ನೇ ಸಮಾಧಿ ಉತ್ಸವವನ್ನು ಆಚರಿಸೋಣ, ಕೃತಾರ್ಥರಾಗೋಣ.

**- ಆಯ್.ಕೆ. ಬಲೂಚಗಿ.**
ಮಾಜಿ ಅಧ್ಯಕ್ಷರು, ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ.
ಗದಗ-ಬೆಟಗೇರಿ.

ಕೋವಿಡ್-19 ವಂಚನೆ

## ಡಿಕೆಶಿ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿ ರಚಿಸಿ ಸಿಎಂ ಆದೇಶ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಎಸ್ ಯಡಿಯೂರಪ್ಪ ನೇತೃತ್ವದ ಹಿಂದಿನ ಬಿಜೆಪಿ ಸರ್ಕಾರದ ಅಡಿಯಲ್ಲಿ ಕೋವಿಡ್ -19 ಸಾಂಕ್ರಾಮಿಕ ಸಮಯದಲ್ಲಿ ನಡೆದಿದೆ ಎನ್ನಲಾದ 7,223.64 ಕೋಟಿ ಆರ್ಥಿಕ ಅಕ್ರಮಗಳ ಕುರಿತು ತನಿಖೆಗೆ ರಾಜ್ಯ ಸರ್ಕಾರವು ವಿಶೇಷ ತನಿಖಾ ತಂಡವನ್ನು ಪ್ರಾರಂಭಿಸಲು ಸಚಿವ ಸಂಪುಟದಲ್ಲಿ ಅನುಮತಿ ನೀಡಲಾಗಿದೆ. ಇದೀಗ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಹೊರಡಿಸಿದ್ದಾರೆ.

"ಕೋವಿಡ್-19 ಸಾಂಕ್ರಾಮಿಕ ರೋಗ ನಿರ್ವಹಣೆಯ ವೇಳೆ ನಡೆದಿರಬಹುದಾದ ಅವ್ಯವಹಾರಗಳ ತನಿಖೆಗೆ ರಚಿಸಲಾಗಿದ್ದ ನಿವೃತ್ತ



ನ್ಯಾಯಮೂರ್ತಿ ಜಾನ್ ಮೈಕಲ್ ಡಿ ಕುನ್ಹಾ ಅವರ ನೇತೃತ್ವದ ವಿಚಾರಣಾ ಆಯೋಗವು ತನ್ನ ಮೊದಲ ವರದಿ ನೀಡಿದೆ. ಸದರಿ ವರದಿಯಲ್ಲಿ ಬೃಹತ್ ಪ್ರಮಾಣದ ಹಗರಣ ನಡೆದಿರುವುದಾಗಿ ಉಲ್ಲೇಖಿಸಿದ್ದು, ಈ ಕುರಿತು ಕ್ರಮ ಕೈಗೊಳ್ಳಬಹುದೆಂದು ತಿಳಿಸಲಾಗಿದೆ. ಈ ನಿಟ್ಟಿನಲ್ಲಿ ಪರಿಶೀಲಿಸಿ, ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ಉಪಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಿ, ಆದೇಶಿಸಿದ್ದೇನೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಮಿತಿಯಲ್ಲಿ ಡಿಕೆ ಶಿವಕುಮಾರ್ ಅಧ್ಯಕ್ಷರಾಗಿದ್ದರೆ, ಸದಸ್ಯರಾಗಿ ಮಂತ್ರಿಗಳಾದ ಡಾ. ಜಿ.ಪರಮೇಶ್ವರ, ಎಚ್. ಕೆ. ಪಾಟೀಲ್, ದಿನೇಶ್ ಗುಂಡೂರಾವ್, ಪ್ರಿಯಾಂಕ್ ಖರ್ಗೆ, ಸಂತೋಷ್ ಲಾಡ್ ಮತ್ತು ಶರಣ ಪ್ರಕಾಶ್ ಪಾಟೀಲ್ ಇದ್ದಾರೆ.

ಮಾಸ್ಕ್, ಔಷಧಿ, ಆಮ್ಲಜನಕ ಸಿಲಿಂಡರ್‌ಗಳು ಮತ್ತು ಪಿಪಿಇ ಕಿಟ್ ಸೇರಿದಂತೆ ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿನ ಅಕ್ರಮಗಳನ್ನು ವರದಿಯು ಬಹಿರಂಗಪಡಿಸಿದೆ. ಸರ್ಕಾರದ ಅನುಮೋದನೆಯಿಲ್ಲದೆ ಹಲವಾರು ವಸ್ತುಗಳನ್ನು ಖರೀದಿಸಲಾಗಿದೆ. ಸಾವಿನ ಗಣತಿಯನ್ನು ತಿರುಚುವುದು ಕೂಡ ಆರೋಪಗಳಲ್ಲಿ ಒಂದಾಗಿದೆ.


ಬೈರುತ್ ಮೇಲೆ ಮುಂದುವರಿದ ಇಸ್ರೇಲ್ ವೈಮಾನಿಕ ದಾಳಿ

## ಕನಿಷ್ಠ 22 ಮಂದಿ ಸಾವು, ಯುಎನ್ ಶಾಂತಿಪಾಲಕರ ಮೇಲೆ ಗುಂಡು!

■ ವಿಜಯಸಾಕ್ಷಿ ಸುದ್ದಿ, ಬೈರುತ್

ಮಧ್ಯ ಬೈರುತ್‌ನಲ್ಲಿ ಗುರುವಾರ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ 22 ಜನರು ಸಾವನ್ನಪ್ಪಿದ್ದು, ಡಜನ್‌ಗಟ್ಟಲೆ ಜನರು ಗಾಯಗೊಂಡಿದ್ದಾರೆ ಎಂದು ಲೆಬನಾನ್‌ನ ಆರೋಗ್ಯ ಸಚಿವಾಲಯ ತಿಳಿಸಿದೆ. ಜೊತೆಗೆ, ಲೆಬನಾನ್‌ನಲ್ಲಿ ಇರಾನ್ ಬೆಂಬಲಿತ ಹೆಜ್ಬೊಲ್ಲಾ ಸಂಘಟನೆಯೊಂದಿಗೆ ಇಸ್ರೇಲ್ ರಕ್ತಸಿಕ್ತ ಸಂಘರ್ಷವನ್ನು ಮತ್ತಷ್ಟು ಹೆಚ್ಚಿಸಿದೆ.

ಸೆಂಟ್ರಲ್ ಬೈರುತ್‌ನಲ್ಲಿ ನಡೆದ ವೈಮಾನಿಕ ದಾಳಿಯು ಕಳೆದ ಒಂದು ವರ್ಷದ ಯುದ್ಧದಲ್ಲಿ ಅತ್ಯಂತ ಮಾರಣಾಂತಿಕವಾಗಿದೆ. ಸ್ಥಳದಲ್ಲಿದ್ದ ಪತ್ರಕರ್ತರ ಪ್ರಕಾರ, ಏಕಕಾಲದಲ್ಲಿ ಪ್ರತ್ಯೇಕ ನೆರೆಹೊರೆಯಲ್ಲಿ ಎರಡು ವಸತಿ ಕಟ್ಟಡಗಳನ್ನು ಗುರಿಯಾಗಿಸಿಕೊಳ್ಳಲಾಗಿಒದೆ. ಇದು ಎಂಟು ಅಂತಸ್ತಿನ ಕಟ್ಟಡವನ್ನು ಉರುಳಿಸಿತು ಮತ್ತು ಇನ್ನೊಂದರ ಕೆಳಗಿನ ಮಹಡಿಗಳನ್ನು ಸುಟ್ಟುಹಾಕಿದೆ.



ವರದಿಯಾದ ದಾಳಿಗಳನ್ನು ಪರಿಶೀಲಿಸುತ್ತಿರುವುದಾಗಿ ಇಸ್ರೇಲಿ ಮಿಲಿಟರಿ ಹೇಳಿದೆ. ಬೈರುತ್‌ನ ಬಿಗಿಯಾಗಿ ಪ್ಯಾಕ್ ಮಾಡಲಾದ ದಕ್ಷಿಣ ಉಪನಗರಗಳಲ್ಲಿ ಇಸ್ರೇಲಿ ವೈಮಾನಿಕ ದಾಳಿಗಳು ಹೆಚ್ಚು ಸಾಮಾನ್ಯವಾಗಿದೆ, ಅಲ್ಲಿ ಹಿಜ್ಬುಲ್ಲಾ ತನ್ನ ಅನೇಕ ಕಾರ್ಯಾಚರಣೆಗಳನ್ನು ಆಧರಿಸಿದೆ.

ದಾಳಿಯ ನಂತರ, ಗುಂಪಿನೊಂದಿಗೆ ಉನ್ನತ ಭದ್ರತಾ ಅಧಿಕಾರಿ ವಫೀಕ್ ಸಫಾವನ್ನು ಕೊಲ್ಲುವ ಪ್ರಯತ್ನ ವಿಫಲವಾಗಿದೆ ಎಂದು ಹಿಜ್ಬುಲ್ಲಾದ ಅಲ್ ಮನರ್ ಟಿವಿ ವರದಿ ಮಾಡಿದೆ. ಉದ್ದೇಶಿತ ಎರಡೂ ಕಟ್ಟಡಗಳ ಒಳಗೆ ಸಫಾ ಇರಲಿಲ್ಲ ಎಂದು ಅದು ಹೇಳಿದೆ.

ಗುರುವಾರದ ನಡೆದ ದಾಳಿಯಲ್ಲಿ ಹೆಜ್ಬೊಲ್ಲಾ ಮತ್ತು ಇಸ್ರೇಲ್ ನಡುವಿನ ಒಂದು ವರ್ಷದ ದಾಳಿಗಳ ವಿನಿಮಯದ ನಂತರ ಇತ್ತೀಚಿನ ವಾರಗಳಲ್ಲಿ ಸಂಪೂರ್ಣ ಯುದ್ಧಕ್ಕೆ ತಯಾರಾಗಿವೆ. ಇಸ್ರೇಲ್ ಲೆಬನಾನ್‌ನಾದ್ಯಂತ ಭಾರೀ ದಾಳಿಯ ಅಲೆಗಳನ್ನು ನಡೆಸಿತು. ನೇರವಾಗಿ ಆಕ್ರಮಣವನ್ನು ಪ್ರಾರಂಭಿಸಿತು. ಹೆಜ್ಬೊಲ್ಲಾಹ್ ತನ್ನ ರಾಕೆಟ್ ದಾಳಿಯನ್ನು ಇಸ್ರೇಲ್‌ನ ಹೆಚ್ಚು ಜನನಿಬಿಡ ಪ್ರದೇಶಗಳಿಗೆ ವಿಸ್ತರಿಸಿದೆ, ಇದು ಕೆಲವು ಸಾವುನೋವುಗಳಿಗೆ ಕಾರಣವಾಯಿತು. ದೈನಂದಿನ ಜನ ಜೀವನವನ್ನು ಅಡ್ಡಿಪಡಿಸಿದೆ.

ದಕ್ಷಿಣ ಲೆಬನಾನ್‌ನಲ್ಲಿ ಇಸ್ರೇಲಿ ಪಡೆಗಳು ವಿಶ್ವಸಂಸ್ಥೆಯ ಶಾಂತಿಪಾಲಕರ ಮೇಲೆ ಗುಂಡು ಹಾರಿಸಿ ಅವರಲ್ಲಿ ಇಬ್ಬರನ್ನು ಗಾಯಗೊಳಿಸಿದ ಅದೇ ದಿನ ಈ ದಾಳಿಯು ವ್ಯಾಪಕ ಖಂಡನೆಗೆ ಕಾರಣವಾಯಿತು. ಇಟಲಿಯ ರಕ್ಷಣಾ ಸಚಿವಾಲಯವು ಇಸ್ರೇಲ್‌ನ ರಾಯಭಾರಿಯನ್ನು ಪ್ರತಿಭಟನೆಗೆ ಕರೆಸುವಂತೆ ಪ್ರೇರೇಪಿಸಿತು.

ರಾಸ್ ಅಲ್-ನಬಾ ಅಕ್ಕಪಕ್ಕ ಮತ್ತು ಬುರ್ಜ್ ಅಬಿ ಹೈದರ್ ಪ್ರದೇಶದಲ್ಲಿ ಎರಡು ಬೈರುತ್ ಸೈಟ್‌ಗಳ ಅವಶೇಷಗಳಡಿಯಲ್ಲಿ ಹೆಚ್ಚಿನ ಸಂಖ್ಯೆಯ ಆಂಬ್ಯುಲೆನ್ಸ್‌ಗಳು ಮತ್ತು ಜನರು ಸೇರುತ್ತಿದ್ದಾರೆ ಎಂದು ಸ್ಥಳದಲ್ಲಿರುವ ಪತ್ರಕರ್ತರು ವರದಿ ಮಾಡಿದ್ದಾರೆ.

ದಾಳಿಯಲ್ಲಿ 22 ಜನರು ಸಾವನ್ನಪ್ಪಿದ್ದು, 117 ಜನರು ಗಾಯಗೊಂಡಿದ್ದಾರೆ ಎಂದು ಲೆಬನಾನಿನ ಆರೋಗ್ಯ ಸಚಿವಾಲಯ ತಿಳಿಸಿದೆ. ಬೈರುತ್‌ಗೆ ಹೊಂದಿಕೊಂಡಿರುವ ನೆರೆಹೊರೆಗಳಲ್ಲಿ ಇತ್ತೀಚಿನ ಇಸ್ರೇಲಿ ವೈಮಾನಿಕ ದಾಳಿಗಳು, ನಿರ್ದಿಷ್ಟವಾಗಿ ಜನನಿಬಿಡ ದಕ್ಷಿಣದ ಉಪನಗರಗಳು, ಹಿಜ್ಬುಲ್ಲಾದ ನಾಯಕ, ಹಸನ್ ನಸ್ರಲ್ಲಾಹ್ ಮತ್ತು ಇತರ ಹಿರಿಯ ಕಮಾಂಡರ್‌ಗಳನ್ನು ಕೊಂದಿವೆ.

ಅಕ್ಟೋಬರ್ 8, 2023 ರಂದು ಹಮಾಸ್ ಮತ್ತು ಪ್ಯಾಲೆಸ್ಟೀನಿಯನ್ನರನ್ನು ಬೆಂಬಲಿಸಲು ಹಿಜ್ಬುಲ್ಲಾ ಇಸ್ರೇಲ್‌ನಲ್ಲಿ ರಾಕೆಟ್‌ಗಳನ್ನು ಹಾರಿಸಲು ಪ್ರಾರಂಭಿಸಿತು, ಪ್ರತೀಕಾರವಾಗಿ ಇಸ್ರೇಲಿ ವೈಮಾನಿಕ ದಾಳಿಗಳನ್ನು ತೀವ್ರಗೊಳಿಸಿತು.

ಉತ್ತರ ಇಸ್ರೇಲ್‌ನ ಕೆಲವು ಭಾಗಗಳಲ್ಲಿ ವೈಮಾನಿಕ ದಾಳಿಯ ಸೈರನ್‌ಗಳನ್ನು ಹಾಕುವ ಮೂಲಕ ಹಿಜ್ಬುಲ್ಲಾ ಗುರುವಾರ ಇಸ್ರೇಲ್‌ಗೆ ರಾಕೆಟ್ ದಾಳಿ ನಡೆಸಿತು. ಇಸ್ರೇಲ್ ಕಡೆಗೆ ಸಾಗುತ್ತಿದ್ದ ಹಲವಾರು ಡ್ರೋನ್‌ಗಳನ್ನು ತಡೆಹಿಡಿಯಲಾಗಿದೆ ಎಂದು ಸೇನೆ ತಿಳಿಸಿದೆ.

### ಇಡೀ ರಾತ್ರಿ ಸುರಿದ ಮಳೆಗೆ ಜನಜೀವನ ಅಸ್ತವ್ಯಸ್ತ | ರೈತರ ಮೊಗದಲ್ಲಿ ಚಿಂತೆಯ ಗೆರೆ

# ಮಳೆರಾಯನ ಆರ್ಭಟ ಸೃಷ್ಟಿಸಿದ ಅವಾಂತರ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಳೆರಾಯನ ಆರ್ಭಟ ಮತ್ತೆ ಮುಂದುವರೆದಿದ್ದು, ತಾಲೂಕಿನಾದ್ಯಂತ ಬುಧವಾರ ರಾತ್ರಿಯಿಂದ ಗುರುವಾರ ಬೆಳಗಿನ ಜಾವದವರೆಗೂ ಸುರಿದ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಹಳ್ಳಗಳು ತುಂಬಿ ಹರಿಯುತ್ತಿವೆ, ಹೊಲಗದ್ದೆಗಳಲ್ಲಿನ ಬೆಳೆಗಳು ನೀರಿನಲ್ಲಿ ನಿಂತುಕೊಂಡಿವೆ. ಕಳೆದೆರಡು ದಿನಗಳಿಂದ ಮಳೆ ವೇಳೆ ಬಿಟ್ಟು ವೇಳೆ ಅಬ್ಬರಿಸುತ್ತಿದ್ದು, ಸಾರ್ವಜನಿಕರು, ರೈತರು ಪರಿತಪಿಸುವಂತಾಗಿತ್ತು.

ತಾಲೂಕಿನ ಬಡ್ನಿ, ಹುಲ್ಲೂರ, ದೊಡ್ಡೂರ, ಮಾಡಳ್ಳಿ, ಶ್ಯಾಬಳಾ, ಗೊಜನೂರು, ಯಳವತ್ತಿ, ಯತ್ನಳ್ಳಿ ಸೇರಿ ಬಹುತೇಕ ಕಡೆ ಹಳ್ಳಗಳು ತುಂಬಿ ಹರಿದಿವೆ. ಕೆಲ ಕಡೆ ರಸ್ತೆ ಮಾರ್ಗದ ಕಿರು ಸೇತುವೆ ಮೇಲೆಯೇ ಅಪಾರ ಪ್ರಮಾಣದ ನೀರು ಹರಿದು ಮೂರ್ನಾಲ್ಕು ಗಂಟೆಗಳ ಕಾಲ ರಸ್ತೆ ಸಂಚಾರ ಅಸ್ತವ್ಯಸ್ಥಗೊಂಡಿತ್ತು. ದೊಡ್ಡೂರು ರಸ್ತೆಯಲ್ಲಿರುವ ಹಳ್ಳದ ಮೇಲಿನ ಸೇತುವೆ ಮೇಲೆ ಅಪಾರ ಪ್ರಮಾಣದ ನೀರು ಹರಿದು ಕೆಲಕಾಲ ಸಂಚಾರ ಸ್ಥಗಿತಗೊಂಡಿತ್ತು. ರಾತ್ರಿಯಿಡೀ ಮಳೆ ಸುರಿದ ಪರಿಣಾಮ ಮನೆಗಳು ಸೋರಿ ಜನರು ಪರದಾಡಿದರು.

ಅನೇಕ ಕಡೆ ಚರಂಡಿಗಳು ತುಂಬಿ ನೀರು ರಸ್ತೆಯ ಮೇಲೆಯೇ ಹರಿದಿವೆ. ರಸ್ತೆ ಮೇಲೆ ನೀರು ಹರಿದು ರಸ್ತೆಗಳು ಸಂಪೂರ್ಣ ಹದಗಟ್ಟಿವೆ. ಅನೇಕ ಬೆಳೆಗಳು ಹಾಳಾಗುವ ಭೀತಿ ರೈತರನ್ನು ಕಾಡುತ್ತಿದೆ. ಸ್ವಲ್ಪ ಬಿಡುವು ದೊರಕಿದರೆ ಬೆಳೆದು ನಿಂತ ಬೆಳೆಗಳ ನಡುವೆ ಕಳೆ ತೆಗೆಯುವದಕ್ಕೆ ಮುಂದಾಗಿದ್ದ ರೈತರಿಗೆ ಈ ಅಕಾಲಿಕ ಮಳೆ ಆಘಾತವನ್ನು ತಂದಿದೆ. ರಸ್ತೆಗಳ ಸ್ಥಿತಿಯಂತೂ ಅಯೋಮಯವಾಗಿದ್ದು, ಬಹುತೇಕ ಎಲ್ಲ ರಸ್ತೆಗಳು ಹದಗೆಟ್ಟು ಸಂಚಾರಕ್ಕೆ ಸಂಚಕಾರ ತಂದಿಟ್ಟಿವೆ.



ರೈತರು ತಾವು ಬೆಳೆದ ಬೆಳೆಯನ್ನು ಒಕ್ಕಲು ಮಾಡಿ ಬೆಳೆ ಒಣಗಿ ಹಾಕಿರುವದನ್ನು ರಕ್ಷಿಸಿಕೊಳ್ಳಲು ತಾಡಪಾಲು, ಪ್ಲಾಸ್ಟಿಕ್ ಹಾಳೆಗಳನ್ನು ಮುಚ್ಚಿ ಅವುಗಳಿಗೆ ನೀರು ತಾಕದಂತೆ ಹರಸಾಹಸ ಪಟ್ಟಿದ್ದಾರೆ. ಆದರೆ ಪಟ್ಟಣದ ಸೋಮೇಶ್ವರ ತೇರಿನ ಮನೆ ಬಳಿ ರಸ್ತೆಯಲ್ಲಿ ರೈತರು ಗೋವಿನಜೋಳದ ಕಾಳುಗಳನ್ನು ಒಣಗಿ ಹಾಕಿದ್ದು, ಬುಧವಾರ ಮತ್ತು ಗುರುವಾರ ಸುರಿದ ಮಳೆಯಿಂದ ರಕ್ಷಿಸಿಕೊಳ್ಳಲು ಪರದಾಡಿದರು.

ಈ ಬಾರಿ ಹಿಂಗಾರು ಮಳೆ ಸ್ವಲ್ಪ ವಿಳಂಬವಾಗಿದ್ದು, ರೈತರು ಬಿತ್ತನೆಗೆ ಹಿಂದೇಟು ಹಾಕುವಂತಹ ಪರಿಸ್ಥಿತಿ ಇತ್ತು. ಆದರೆ ಕಳೆದ ಒಂದು ವಾರದಲ್ಲಿ ಸುಮಾರು 3–4 ಬಾರಿ ದೊಡ್ಡ ಪ್ರಮಾಣದಲ್ಲಿ ಮಳೆ ಸುರಿದಿದ್ದು, ಬಿತ್ತನೆ ಕಾರ್ಯಕ್ಕೆ ಮತ್ತಷ್ಟು ವಿಳಂಬವಾಗುತ್ತಿರುವುದು ಒಂದೆಡೆಯಾದರೆ, ಬೆಳೆದ ಬೆಳೆ ರಕ್ಷಿಸಿಕೊಳ್ಳಲು ಹರಸಾಹಸ ಪಡುವಂತಾಗಿದೆ.



ಮಂಗಳವಾರ, ಬುಧವಾರ ಮಧ್ಯರಾತ್ರಿ, ಬುಧವಾರ ಸಂಜೆ ಹಾಗೂ ಗುರುವಾರ ಸಂಜೆ ಹೀಗೆ ಮಳೆ ಸುರಿದ ಪರಿಣಾಮ ಜಮೀನುಗಳಲ್ಲಿ ನೀರು ನಿಂತು ಬೆಳೆಹಾಳಾಗುವ ಭೀತಿ ಉಂಟಾಗಿದೆ.

### ಅಕ್ಕನ ಬಳಗದಲ್ಲಿ ನವರಾತ್ರಿ ಪ್ರಯುಕ್ತ ವಿಶೇಷ ಕಾರ್ಯಕ್ರಮ

# ಹಬ್ಬಗಳಿಗೆ ವೈಜ್ಞಾನಿಕ ಹಿನ್ನೆಲೆಯಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸನಾತನ ಹಿಂದೂ ಧರ್ಮದಲ್ಲಿ ಪ್ರಕೃತಿ ಪೂಜೆ ಮಾಡುವ ವಾಡಿಕೆ ಇದೆ. ಶಮೀ ವೃಕ್ಷವನ್ನು ನವರಾತ್ರಿಯಲ್ಲಿ ಪೂಜಿಸುತ್ತೇವೆ. ಬನ್ನಿ ಗಿಡದಲ್ಲಿ ಶ್ರೀ ದುರ್ಗಾದೇವಿ ವಾಸವಾಗಿದ್ದಾಳೆ ಎಂಬ ನಂಬಿಕೆ ನಮ್ಮದು. ದುಷ್ಟ ಶಕ್ತಿಗಳನ್ನು ಸಂಹಾರ ಮಾಡುವುದೇ ನವರಾತ್ರಿ ಪೂಜೆಯ ಸಂಕೇತ. ರಾಕ್ಷಸರ ಸಂಹಾರ ಮಾಡಿ ಸಾಧಿಸುವ ವಿಜಯವೇ ವಿಜಯದಶಮಿ. ಹಬ್ಬಗಳು ತಮ್ಮದೇ ಆದ ಮಹತ್ವವನ್ನು ಪಡೆದು ಕೊಂಡಿರುತ್ತವೆ. ಅವುಗಳನ್ನು ಕೇವಲ ಪೌರಾಣಿಕ ಅಥವಾ ಸಾಂಪ್ರದಾಯಿಕ ಹಿನ್ನೆಲೆಯಿಂದ ನೋಡದೆ ವಾಸ್ತವಿಕ ಪ್ರಜ್ಞೆ ಮತ್ತು ವೈಜ್ಞಾನಿಕ ದೃಷ್ಟಿಕೋನದಿಂದ ನೋಡಿದಾಗ ಅವುಗಳ ಮಹತ್ವದ ಅರಿವು ನಮಗಾಗುತ್ತದೆ ಎಂದು ಆಧ್ಯಾತ್ಮ ಚಿಂತಕಿ ರುಕ್ಮಿಣಿಬಾಯಿ ದ್ವಾರಪಾಲಕ ಅಭಿಪ್ರಾಯಪಟ್ಟರು.



ಇಲ್ಲಿನ ಅಕ್ಕನ ಬಳಗದಲ್ಲಿ ನವರಾತ್ರಿ ಪ್ರಯುಕ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಲತಾ ಮುತ್ತಿನಪೆಂಡಿಮಠ ಹಾಗೂ ಮಂಗಲಾ ನಾಲವಾತ್ವಾಡಮಠ ಬಳಗದ ಸದಸ್ಯರಿಗಾಗಿ ಆಟಗಳನ್ನು ಆಡಿಸಿದರು. ಜಯಶ್ರೀ ಬಾಳಿಹಳ್ಳಿಮಠ, ಬೀನಾ ಮಾನ್ವಿ, ಆರತಿ ಜೀರಂಕಳ ಬಹುಮಾನ ಪಡೆದರು. ಹಿರಿಯ ಟ್ರಸ್ಟಿಗಳಾದ ಶಿವಲೀಲಾ ಕುರಡಗಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಖಜಾಂಚಿಗಳಾದ ಜಯಲಕ್ಷ್ಮೀ ಬಳ್ಳಾರಿ ಅವರು ಕಾರ್ಯಕ್ರಮ ಸಂಯೋಜಿಸಿದರು. ಉಮಾ ರಾಮನಕೊಪ್ಪ ಪರಿಚಯಿಸಿದರು.

ನಾಗರತ್ನ ಹುಬಳಿಮಠ, ಮಂಜುಳಾ ಹುಬಳ್ಳಿಮಠ, ಗಿರಿಜಾ ನಾಲವಾತ್ವಾಡಮಠ, ಮಂಗಲಾ ಗೊಡಚಿ, ಸುಜಾತಾ ಮಾನ್ವಿ, ರೇಖಾ ಉಮೇಶ ಶಗ್ಗಿಮಠ, ಶೈಲಾ ಭೂಸನೂರಮಠ, ನಿರ್ಮಲಾ ಹುಬಳಿಮಠ, ಕಲಾವತಿ ಪಟ್ಟಣಶೆಟ್ಟಿ, ಪುಷ್ಪಾ ಬಳ್ಳಾರಿ, ನೀತಾ ದುಂದೂರ, ಪುಷ್ಪಾ ಹಿರೇಮಠ, ಉಮಾ ಲಕ್ಷ್ಮೇಶ್ವರಮಠ, ಬೀನಾ ಮಾನ್ವಿ, ಪಾರ್ವತಿ ಮಾಳೆಕೊಪ್ಪಮಠ, ದಾನೇಶ್ವರಿ,

ಸುಗಲಾ, ಸುವರ್ಣ ಹೊಸಂಗಡಿ ಮುಂತಾದವರು ಪಾಲ್ಗೊಂಡಿದ್ದರು.

ಅಕ್ಕನ ಬಳಗಕ್ಕೆ ಹೊಸದಾಗಿ ಆರತಿ ಜೀರಂಕಳೆ, ಲಕ್ಷ್ಮೀ ಕುರುಗೋಡ, ವಾಣಿ ಮುನವಳ್ಳಿ ಸದಸ್ಯತ್ವವನ್ನು ಪಡೆದರು. ಬಳಗದ ಅಧ್ಯಕ್ಷರಾದ ಲಲಿತಾ ವಿ.ಬಾಳಿಹಳ್ಳಿಮಠ ಸರ್ವರನ್ನೂ ಸ್ವಾಗತಿಸಿದರು.

ಪ್ರಸಾದದ ಭಕ್ತಿ ಸೇವೆಯನ್ನು ಶಾಂತಾ ವಿ. ಸಂಕನೂರ ವಹಿಸಿಕೊಂಡಿದ್ದರು. ದೀಪಾ ಪಟ್ಟಣಶೆಟ್ಟಿ ನಿರೂಪಿಸಿದರು. ಲಲಿತಾ ಇಂಗಳಳ್ಳಿ ಪ್ರಾರ್ಥಿಸಿದರು. ರೇಣುಕಾ ಅಮಾತ್ಯ ವಂದಿಸಿದರು.



ಗದಗ ದಸರಾ ಉತ್ಸವ–2024 ಹಾಗೂ ಎಸ್‌ಎಸ್‌ಕೆ ಸಮಾಜದ ವತಿಯಿಂದ ನಡೆದ ಅದ್ದೂರಿ ಕಾರ್ಯಕ್ರಮದಲ್ಲಿ ಯುವ ಮುಖಂಡ ಹಾಗೂ ಗದುಗಿನ ಗಣ್ಯ ಉದ್ಯಮಿ ವೀರೇಶ್ ಅಂಗಡಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಫಕೀರಸಾ ಭಾಂಡಗೆ, ಪ್ರಕಾಶ್ ಬಾಕಳೆ, ಸುಧೀರ್ ಕಾಟಿಗಾರ್, ದಸರಾ ಉತ್ಸವ ಸಮಿತಿಯ ವೈಸ್ ಚೇರ್ಮನ್ ಸಾಗರ್ ಪವಾರ ಹಾಗೂ ಸಮಾಜ ಬಾಂಧವರು ಉಪಸ್ಥಿತರಿದ್ದರು.



ಅಬ್ಬಿಗೇರಿ ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ ಹಿರೇಮಠ ಅಬ್ಬಿಗೇರಿ–ಸಿದ್ದರಬೆಟ್ಟ ಕ್ಷೇತ್ರದ ಶ್ರೀ ಷ. ಬ್ರ. ವೀರಭದ್ರ ಶಿವಾಚಾರ್ಯ ಸ್ವಾಮಿಗಳಿಂದ ಸದ್ಭಕ್ತರಾದ ಎಚ್.ಎನ್. ಚಿಗರಿ, ಬಿ.ಎಸ್. ಕಂಠಿ, ಅಂದಪ್ಪ ವೀರಾಪೂರ, ಬಸವರಾಜ ವೀರಾಪೂರ, ಕೆ.ಟಿ. ಕಾಳಗಿ, ಮಲ್ಲಿಕಾರ್ಜುನ ಕಲಕಂಬಿ, ಎಚ್.ಎಸ್. ಗೌರಿ, ಕಲ್ಲಪ್ಪ ಅರಳಿ ಮುಂತಾದವರು ಆಶೀರ್ವಾದ ಪಡೆದುಕೊಂಡರು.

# ಆರ್.ಎಸ್. ಬುರಡಿಯವರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಸಂಗೀತ ಶಿಕ್ಷಕರ ಸಂಘ ಬೆಂಗಳೂರು ಇದರ ಜಿಲ್ಲಾ ಸಂಗೀತ ಶಿಕ್ಷಕರ ಸಂಘ ಗದಗ ಹಾಗೂ ಶ್ರೀ ಕೆ.ಕೆ.ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಗದಗ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ನೂತನ ಉಪನಿರ್ದೇಶಕರಾಗಿ ಅಧಿಕಾರ ಸ್ವೀಕರಿಸಿದ ಆರ್.ಎಸ್. ಬುರಡಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸಂಗೀತ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಡಿ. ಆರಟ್ಟಿ (ಜಿ.ಎಚ್. ಎಸ್. ಹಿರೇಹಾಳ), ಹನಮಂತ ವಿ.ಮಳಲಿ (ಕೆ.ವಿ.ವಿ. ಪ್ರೌಢಶಾಲೆ, ಹೊಳೆ–ಆಲೂರ), ಶ್ರೀ ಕೆ.ಕೆ.ಪಿ.ಪಿ.ಜಿ. ಸಂಗೀತ ಪಾಠಶಾಲೆಯ ಮುಖ್ಯೋಪಾಧ್ಯಾಯ ಎಮ್. ಎಸ್. ಹಿರೇಮಠ, ಸಹ ಶಿಕ್ಷಕರಾದ ವೆಂಕಟೇಶಬಾಬು ಎಸ್., ಪಿ.ಎಚ್. ಹಡಪದ ಉಪಸ್ಥಿತರಿದ್ದರು.

# ಉತ್ತರ ಪ್ರದೇಶ ಉಪಚುನಾವಣೆ | ಕಾಂಗ್ರೆಸ್ ಜೊತೆ ಒಗ್ಗಟ್ಟಿನ ಹೋರಾಟ ಎಂದ ಅಖಿಲೇಶ್

**■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ**

ಉತ್ತರ ಪ್ರದೇಶದಲ್ಲಿ ಮುಂಬರುವ ಉಪಚುನಾವಣೆಯಲ್ಲಿ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡು ಸ್ಪರ್ಧಿಸಲಿದ್ದೇವೆ ಎಂದು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು ಗುರುವಾರ ಹೇಳಿದ್ದಾರೆ ಎಂದು ದಿ ಹಿಂದೂ ವರದಿ ಮಾಡಿದೆ. ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋತ ಎರಡು ದಿನಗಳ ನಂತರ ಅಖಿಲೇಶ್ ಯಾದವ್ ಅವರು ಗುರುವಾರ ಈ ಹೇಳಿಕೆ ನೀಡಿದ್ದಾರೆ.

ಸಮಾಜವಾದಿ ಪಕ್ಷವು ರಾಜ್ಯದ ಆರು ಉಪಚುನಾವಣೆ ಸ್ಥಾನಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದ ಒಂದು ದಿನದ ನಂತರ ಅಖಿಲೇಶ್ ಅವರು ಈ ಹೇಳಿಕೆ ನೀಡಿದ್ದು, ರಾಜ್ಯದಲ್ಲಿ ವಿಪಕ್ಷಗಳ ಇಂಡಿಯಾ ಒಕ್ಕೂಟ ಅಖಂಡವಾಗಿದೆ ಎಂದು ಹೇಳಿದ್ದಾರೆ. ಚುನಾವಣಾ ಆಯೋಗವು ಉಪಚುನಾವಣೆಯ ವೇಳಾಪಟ್ಟಿಯನ್ನು ಇನ್ನೂ ಪ್ರಕಟಿಸಿಲ್ಲ.



ರಾಜ್ಯದ 10 ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದೆ. ಈ ಪೈಕಿ ಒಂಬತ್ತು ಸ್ಥಾನಗಳು ಇತ್ತೀಚಿನ ಲೋಕಸಭೆ ಚುನಾವಣೆಯಲ್ಲಿ ತಮ್ಮ ಶಾಸಕರು ಸಂಸದರಾಗಿ ಆಯ್ಕೆಯಾದ ನಂತರ ತೆರವಾದ ಕ್ಷೇತ್ರಗಳಾಗಿವೆ. ಉಳಿದ ಒಂದು ಕ್ಷೇತ್ರವಾದ ಸಿಸಮಾವು ಕ್ಷೇತ್ರದ ಹಾಲಿ ಶಾಸಕ ಇರ್ಫಾನ್ ಸೋಲಂಕಿ ಅವರನ್ನು ಬೆಂಕಿ ಹಚ್ಚಿದ ಪ್ರಕರಣದಲ್ಲಿ ದೋಷಿ ಎಂದು ಅನರ್ಹಗೊಳಿಸಿದ್ದರಿಂದ ಅಲ್ಲಿ ಉಪಚುನಾವಣೆ ನಡೆಯುತ್ತಿದೆ.

# ಜಗದಂಬಾ ದೇವಸ್ಥಾನದಲ್ಲಿ ಉಡಿ ತುಂಬುವ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿ ಎಸ್.ಎಸ್.ಕೆ. ಜಗದಂಬಾ ದೇವಸ್ಥಾನದಲ್ಲಿ ಎಸ್.ಎಸ್.ಕೆ. ಸಮಾಜ ಪಂಚ ಕಮಿಟಿ ಮತ್ತು ತರುಣ ಸಂಘ, ಮಹಿಳಾ ಮಂಡಳ ಇವರ ಸಹಯೋಗದಲ್ಲಿ ದಸರಾ ಹಬ್ಬದ ನಿಮಿತ್ತ ಶ್ರೀ ಜಗದಂಬಾ ದೇವಿಗೆ ಕಾಕಡರಾತಿ, ಭಜನೆಯೊಂದಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಲೋಬೋಸಾ ಕುಟುಂಬದ ಮಂಜುನಾಥ ಎನ್.ಕಬಾಡಿ ಮತ್ತು ಮಾಯಾ ಕಬಾಡಿ, ಲೋಬೋಸಾ ಎನ್. ಕಬಾಡಿ ಮತ್ತು ಧನಲಕ್ಷ್ಮಿ ಲೋಬೋಸಾ ಕಬಾಡಿ, ನಾಗರಾಜ ಎನ್.ಕಬಾಡಿ ಮತ್ತು ಸಂಗೀತಾ ನಾಗರಾಜ ಕಬಾಡಿ ದಂಪತಿಗಳಿಂದ ಎಸ್.ಎಸ್. ಕೆ. ಸಮಾಜ ಮತ್ತು ಇತರೇ ಸಮಾಜದ ಸುಮಂಗಲಿಯರಿಗೆ ಉಡಿ ತುಂಬಿದರು.

ದಿ. ನಾರಾಯಣಸಾ ಲೋಬೋಸಾ ಕಬಾಡಿ ಹಾಗೂ ದಿ. ಲಕ್ಷ್ಮೀಬಾಯಿ ನಾರಾಯಣಸಾ ಕಬಾಡಿ ಇವರು ಕಳೆದ 30 ವರ್ಷಗಳಿಂದ ಜಗದಂಬಾ ದೇವಸ್ಥಾನದಲ್ಲಿ ತಮ್ಮ ಧಾರ್ಮಿಕ ಸೇವೆಯನ್ನು ಸಲ್ಲಿಸುತ್ತಾ ಬಂದಿದ್ದಾರೆ.

ಅವರು ನಡೆಸಿಕೊಂಡು ಬಂದಿದ್ದ ಧಾರ್ಮಿಕ ಪ್ರವೃತ್ತಿಯನ್ನು ಅವರ ಕುಟುಂಬ ವರ್ಗದವರು ಮುಂದುವರೆಸಿಕೊಂಡು ಬರುತ್ತಿರುವುದು ವಿಶೇಷವಾಗಿದೆ.

# ಪಂಜಾಬ್ | ಪಂಚಾಯತ್ ಚುನಾವಣೆಗೆ ತಡೆ ಹೇರಿದ ಹೈಕೋರ್ಟ್

**■ವಿಜಯಸಾಕ್ಷಿ ಸುದ್ದಿ, ಪಂಜಾಬ್**

ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಪಂಜಾಬ್‌ನ ಕೆಲವು ಭಾಗಗಳಲ್ಲಿ ಪಂಚಾಯತ್ ಚುನಾವಣೆಗಳನ್ನು ತಡೆಹಿಡಿದಿದ್ದು, ರಾಜ್ಯದ ಆಮ್ ಆದ್ಮಿ ಪಕ್ಷದ ಸರ್ಕಾರವು ಅಧಿಕಾರವನ್ನು ಸ್ಪಷ್ಟವಾಗಿ ದುರುಪಯೋಗ ಮಾಡಿದೆ ಎಂದು ಆರೋಪಿಸಿ ನಾಮಪತ್ರ ಸಲ್ಲಿಸುವ ಹಂತದಲ್ಲಿ ಚುನಾವಣೆಗಳನ್ನು ತಡೆಹಿಡಿದಿದೆ ಎಂದು ಗುರುವಾರ ಲೈವ್ ಲಾ ವರದಿ ಮಾಡಿದೆ.

ಅ.15 ರಂದು ಚುನಾವಣೆ ನಿಗದಿಯಾಗಿತ್ತು. ಚುನಾವಣೆ ವಿರುದ್ಧ ಸುಮಾರು 250 ಅರ್ಜಿಗಳನ್ನು ಸಲ್ಲಿಸಲಾಗಿದ್ದು, ಈ ಹಿನ್ನಲೆಯಲ್ಲಿ ನ್ಯಾಯಾಲಯದ ನಿರ್ದೇಶನ ನೀಡಿದೆ.

ಚುನಾವಣಾಧಿಕಾರಿಗಳು ತಮ್ಮ ಎದುರಾಳಿಗಳ ನಾಮಪತ್ರಗಳನ್ನು ವಿನಾಕಾರಣ ಅಥವಾ ದುರ್ಬಲ ಆಧಾರದ ಮೇಲೆ ತಿರಸ್ಕರಿಸಿದ್ದು, ಹಾಗಾಗಿ ಮತದಾನ ಪ್ರಾರಂಭವಾಗುವ ಮೊದಲೇ ಕೆಲವು ಅಭ್ಯರ್ಥಿಗಳು "ಅವಿರೋಧ"ವಾಗಿ ಚುನಾವಣೆಯಲ್ಲಿ ಗೆದ್ದಿದ್ದಾರೆ ಎಂದು ನ್ಯಾಯಮೂರ್ತಿಗಳಾದ ಸಂದೀಪ್ ಮೌದ್ಗಿಲ್ ಮತ್ತು ದೀಪಕ್ ಗುಪ್ತಾ ಅವರ ಪೀಠವು ಹೇಳಿದೆ.



ಕೆಲವು ಸಂದರ್ಭಗಳಲ್ಲಿ, "ರಾಜ್ಯದಲ್ಲಿ ಆಡಳಿತ ಪಕ್ಷದ" ಅಧಿಕಾರಿಗಳು ನಿರೀಕ್ಷಿತ ಅಭ್ಯರ್ಥಿಗಳ ನಾಮನಿರ್ದೇಶನ ಪತ್ರಗಳನ್ನು ಹರಿದು ಹಾಕಿದ್ದು, ಹಾಗಾಗಿ ಅವರು ಸೋತಿದ್ದಾರೆ ಎಂದು ಹೇಳಿಕೊಳ್ಳುತ್ತಾರೆ ಎಂದು ಕೋರ್ಟ್ ಹೇಳಿದೆ.

ಇಂತಹ ಅಕ್ರಮಗಳ ಮೂಲಕ ಚುನಾವಣೆ ಗೆದ್ದವರು ನಂತರ ಮುಖ್ಯಮಂತ್ರಿ ಭಗವಂತ್ ಸಿಂಗ್ ಮಾನ್ ಅಥವಾ ಅವರ ಪಕ್ಷದ ಶಾಸಕರೊಂದಿಗೆ ಗೆಲುವು ಆಚರಿಸಿದ್ದಾರೆ ಎಂದು ನ್ಯಾಯಾಲಯವು ತನಗೆ ಸಲ್ಲಿಸಿದ ಛಾಯಾಚಿತ್ರಗಳನ್ನು ಆಧರಿಸಿ ಹೇಳಿದೆ.

ಯಾವುದೇ ಅಭ್ಯರ್ಥಿಯನ್ನು "ಅವಿರೋಧವಾಗಿ" ವಿಜೇತ ಎಂದು ಘೋಷಿಸಲು ಸಾಧ್ಯವಿಲ್ಲ ಎಂದು ನ್ಯಾಯಾಲಯವು ಅಭಿಪ್ರಾಯಪಟ್ಟಿದೆ. ಏಕೆಂದರೆ ಅವಿರೋಧ ಆಯ್ಕೆಯು ಅವರಿಗೆ ಮತ ಚಲಾಯಿಸುವ ನಾಗರಿಕನ ಶಾಸನಬದ್ಧ ಹಕ್ಕನ್ನು ಕಸಿದುಕೊಳ್ಳುತ್ತದೆ ಎಂದು ನ್ಯಾಯಾಲಯ ಹೇಳಿದೆ.

ಅಭ್ಯರ್ಥಿಯನ್ನು ತಿರಸ್ಕರಿಸಲು ಮತದಾರರು ನೋಟಾ [ಮೇಲಿನ ಯಾವುದೂ ಅಲ್ಲ] ಆಯ್ಕೆಯನ್ನು ಚಲಾಯಿಸಬಹುದು. ರಾಜ್ಯ ಸರ್ಕಾರದ ಈ ಕ್ರಮಗಳನ್ನು "ಅಸಂವಿಧಾನಿಕ ಮತ್ತು ಕಾನೂನು ಪ್ರಕ್ರಿಯೆಯ ದುರುಪಯೋಗ" ಎಂದು ನ್ಯಾಯಾಲಯ ವಿವರಿಸಿದೆ.

"ಪಂಜಾಬ್ ಸರ್ಕಾರದ ಕ್ರಮವು ಮತದಾರರು ಮತ್ತು ಮತದಾರರ ಹಕ್ಕುಗಳ ಮೇಲೆ ನಿರ್ಬಂಧಗಳನ್ನು ಹೇರಿದೆ. ಮಾತ್ರವಲ್ಲದೆ, ಇದು ನಮ್ಮ ಸಂವಿಧಾನದ ಮೂಲ ರಚನೆಯನ್ನು ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಯನ್ನು ಅದರ ಸಾರವಾಗಿ ನಾಶಪಡಿಸುವ ಪ್ರಯತ್ನವಾಗಿದೆ" ಎಂದು ನ್ಯಾಯಾಲಯ ಹೇಳಿದೆ.

ದಸರಾ ಧರ್ಮ ಸಮ್ಮೇಳನದ 9ನೇ ದಿನದ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ‘ಸತ್ಯ’ ಧರ್ಮವನ್ನು ರಕ್ಷಿಸುವ ರಕ್ಷಾ ಕವಚ

■ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ

(ಮಾನವ ಧರ್ಮ ಮಂಟಪ)

ಬಾಳಿನ ಭಾಗ್ಯೋದಯಕ್ಕೆ ಧರ್ಮದ ಬೆಳಕು ಬೇಕು. ಭೌತಿಕ ಜೀವನದಲ್ಲಿ ಬಳಲಿ ಬಂದವರಿಗೆ ಶಾಂತಿ, ನೆಮ್ಮದಿ ಕರುಣಿಸುವ ಶಕ್ತಿ ಧರ್ಮಕ್ಕಿದೆ. ಸತ್ಯ ಒಂದು ಧರ್ಮ. ಇದು ಧರ್ಮವನ್ನು ರಕ್ಷಿಸುವ ರಕ್ಷಾ ಕವಚ. ಸತ್ಯದ ರಕ್ಷಾ ಕವಚ ಕಳಚಿದರೆ ಈ ಧರ್ಮ ಸಂಸ್ಕೃತಿ ಪರಂಪರೆ ಮತ್ತು ಆದರ್ಶ ಮೌಲ್ಯಗಳು ಬೆಳೆದುಕೊಂಡು ಬರುವುದು ಕಷ್ಟವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 9ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕೇಂದ್ರದ ಆಹಾರ ಮತ್ತು ಗಣಿ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ ಜೋಷಿ ಅವರು ‘ರುದ್ರಗಣಾಧಿಪ ವೀರಭದ್ರ’ ಕೃತಿಯನ್ನು ಬಿಡುಗಡೆ ಮಾಡಿ, ಭಾರತೀಯ ಪುಣ್ಯ ನಾಡಿನಲ್ಲಿ ಎಲ್ಲರಿಗೂ ಬದುಕಿ ಬಾಳುವ ಅವಕಾಶವನ್ನು ಕೊಟ್ಟಿದೆ. ಅವರವರ ಧರ್ಮ ಅವರಿಗೆ ಶ್ರೇಷ್ಠವಾದರೂ ಇನ್ನೊಂದು ಧರ್ಮದ ಬಗ್ಗೆ ಸಹಿಷ್ಣುತಾ ಮನೋಭಾವ ಬೆಳೆದುಕೊಂಡು ಬರಬೇಕಾಗಿದೆ. ಆಧುನಿಕ ಕಾಲದಲ್ಲಿ ಜಾತಿಗಳು ಬೆಳೆಯುತ್ತಿವೆ ಹೊರತು ಧರ್ಮ ಸಂಸ್ಕೃತಿ ಉಳಿಸಿ ಬೆಳೆಸಲು ಹಿಂಜರಿಯುತ್ತಿದ್ದಾರೆ. ಪರಸ್ಪರ ದ್ವೇಷ-ಅಸೂಯೆಗಳು ಬೆಳೆದು ಸಂಘರ್ಷಕ್ಕೆ ಕಾರಣವಾಗುತ್ತಿವೆ. ಶ್ರೀ ರಂಭಾಪುರಿ ಧರ್ಮ ಪೀಠ ವಿಶಾಲ ಮನೋಭಾವನೆ ಹೊಂದಿ ಸರ್ವ ಜನಾಂಗದ ಒಳಿತಿಗಾಗಿ ಸದಾ ಶ್ರಮಿಸುತ್ತಾ ಬಂದಿದೆ ಎಂದರು.



ಸಮಸ್ತ ಜನರ ಭೋಗ, ಮೋಕ್ಷಗಳಿಗೆ ಧರ್ಮವೇ ಮೂಲವಾಗಿದೆ. ಸತ್ಯ ಸೈದ್ಧಾಂತಿಕ ನೆಲೆಗಟ್ಟಿನ ಮೇಲೆ ಭವ್ಯ ಬಾಳಿನ ಸೌಧವನ್ನು ಕಟ್ಟಿಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಶಿವತಪಸ್ಸು, ಶಿವಕರ್ಮ, ಶಿವಜ್ಞಾನ, ಶಿವಜಪ ಮತ್ತು ಶಿವಧ್ಯಾನ ಎಂಬ ಪಂಚ ಯಜ್ಞಗಳ ಮೂಲಕ ಸಂಸ್ಕಾರ ಸದ್ಬೋಧನೆಯನ್ನು ಅರುಹಿ ಸಕಲರನ್ನು ಉದ್ಧರಿಸಿದ್ದಾರೆ. ಅಧರ್ಮದ ವಿರುದ್ಧ ಧರ್ಮದ ದಂಡಯಾತ್ರೆ ಕೈಕೊಂಡು ಜನಮನದ ಶ್ರೇಯಸ್ಸಿಗಾಗಿ ಉಜ್ವಲ ಭವಿಷ್ಯಕ್ಕಾಗಿ ಸದಾ ಶ್ರಮಿಸಿದ್ದಾರೆ. ಅವರು ಬೋಧಿಸಿದ ಅಹಿಂಸಾದಿ ಧ್ಯಾನ ಪರ್ಯಂತರವಾದ ದಶ ಧರ್ಮ ಸೂತ್ರಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪವಾಗಿದೆ ಎಂದರು.

ಕವಲೇದುರ್ಗ ಭುವನಗಿರಿ ಮಠದ ಮರುಳಸಿದ್ಧ ಶಿವಾಚಾರ್ಯ ಶಿವಾಚಾರ್ಯರು ನೇತೃತ್ವ ವಹಿಸಿ ಮಾತನಾಡಿ, ಧರ್ಮವಿಲ್ಲದೇ ಯಾರೂ ಬದುಕಿ ಬಾಳಲು ಸಾಧ್ಯವಿಲ್ಲ. ಧರ್ಮದಿಂದ ದೂರವಾದರೆ, ನೀರಿನಿಂದ ಮೀನನ್ನು ಹೊರ ತೆಗೆದರೆ ಪ್ರಾಣ ಹೇಗೆ ಹೋಗುವುದೋ ಹಾಗೆಯೇ ಧರ್ಮ ಉಲ್ಲಂಘಿಸಿ ನಡೆದವರ ಜೀವನ ಪತನಗೊಳ್ಳುತ್ತದೆ ಎಂದರು.

ಸಮ್ಮುಖ ವಹಿಸಿದ ಜಕ್ಕಲಿ ಹಿರೇಮಠದ ವಿಶ್ವಾರಾಧ್ಯ ಶಿವಾಚಾರ್ಯರು ಮಾತನಾಡಿ, ಭವ ಬಂಧನ ಕಳೆಯಲು ಗುರುವಿಗೆ ಮಾತ್ರ ಸಾಧ್ಯ. ಪರಶಿವನ ಇನ್ನೊಂದು ಸಾಕಾರ ರೂಪವೇ ಗುರುವಾಗಿ ಬಾಳ ಬದುಕಿಗೆ ಬೆಳಕು ತೋರುವನೆಂದರು.

ಪ್ರಾಸ್ತಾವಿಕ ಮಾತನಾಡಿದ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯರು, ಶಾಸ್ತ್ರದಲ್ಲಿ ನಿರೂಪಿಸಿದ ತತ್ವ-ಸಿದ್ಧಾಂತಗಳನ್ನು ಆಚರಿಸಿಕೊಂಡು ಬಂದರೆ ಆರೋಗ್ಯಪೂರ್ಣ ಜೀವನ ಕಟ್ಟಿಕೊಳ್ಳಲು ಸಾಧ್ಯ. ನವರಾತ್ರಿ ಶಕ್ತಿ ಆರಾಧನೆಯ ನಾಡಹಬ್ಬದಲ್ಲಿ ಯತಾರ್ಥ ಜ್ಞಾನವನ್ನು ಅರಿತು ನಡೆಯುವಂತಾಗಬೇಕೆಂದರು.

ಅಬ್ಬಿಗೇರಿ-ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಮಾತನಾಡಿದರು. ಇದೇ ಸಂದರ್ಭದಲ್ಲಿ ಲಿಂ.ಸೋಮಶೇಖರ ಶಿವಾಚಾರ್ಯರ ಕುರಿತ ಕೃತಿಯನ್ನು ಶಾಸಕ ಜಿ.ಎಸ್. ಪಾಟೀಲ ಬಿಡುಗಡೆಗೊಳಿಸಿದರು.

‘ಶ್ರೀ ಪೀಠದ ವಾರ್ತಾ ಸಂಕಲನ’ ಬಿಡುಗಡೆ ಮಾಡಿದ ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ, ನೀರು, ಅನ್ನ, ಸಜ್ಜನರ ಒಳ್ಳೆಯ ಮಾತು ಜೀವನದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ಉತ್ತೇಜನ ನೀಡುತ್ತವೆ. ಶ್ರೀ ರಂಭಾಪುರಿ ಜಗದ್ಗುರುಗಳು ಧರ್ಮ ಸಮಾರಂಭದಲ್ಲಿ ನುಡಿದ ಮಾತುಗಳು ವಾರ್ತಾ ಪತ್ರಿಕೆಗಳಲ್ಲಿ ಸುದ್ದಿ ರೂಪದಲ್ಲಿ ಪ್ರಕಟವಾಗಿ ಒಂದೆಡೆ ಸೇರಿಸಿ ಪ್ರಕಟಗೊಳ್ಳುತ್ತಿರುವುದು ಜಗದ್ಗುರುಗಳ ಕ್ರಿಯಾಶೀಲತೆಗೆ ಸಾಕ್ಷಿಯಾಗಿವೆ ಎಂದರು. ಮುಖ್ಯ ಅತಿಥಿಗಳಾಗಿ ಆಂಧ್ರ ಪ್ರದೇಶದ ಅ.ಭಾ.ವೀರಶೈವ ಮಹಾಸಭಾ ಅಧ್ಯಕ್ಷ ಶಿವಾನಂದಪ್ಪ, ಡಾ. ಐ.ಎಸ್. ಪಾಟೀಲ ಭಾಗವಹಿಸಿದ್ದರು. ಚಲನಚಿತ್ರ ನಟ ದೊಡ್ಡಣ್ಣ ಮಾತನಾಡಿದರು.

ಶ್ರೀಮದ್ವೀರಶೈವ ಸ.ಸಂ. ಬೆಂಗಳೂರು ಜಿಲ್ಲಾ ಘಟಕದ ಅಧ್ಯಕ್ಷ ಬೀರೂರು ಶಿವಸ್ವಾಮಿ ಸ್ವಾಗತಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಗದಗಿನ ಗಾನಭೂಷಣ ವೀರೇಶ ಕಿತ್ತೂರ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ಹಾಗೂ ಸವಣೂರಿನ ಡಾ.ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಸುರೇಶ ಹೆ.ಅವರಡ್ಡಿ, ಆನಂದ ಬಸವರಾಜ ಕಮತಗಿ ಹುಬ್ಬಳ್ಳಿ, ವೀರಪ್ಪ ಆನಂದಪ್ಪ ಮಲ್ಲಾಪುರ ಇವರಿಂದ ಅನ್ನ ದಾಸೋಹದ ಸೇವೆ ಜರುಗಿತು.

## ಗುರುರಕ್ಷೆ

ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಚಿಮ್ಮಲಗಿ ಹಿರೇಮಠದ ಸಿದ್ಧರೇಣುಕ ಶಿವಾಚಾರ್ಯರು, ಸಿದ್ಧನಕೊಳ್ಳ-ಮಾರನಬಸರಿ ಶಿವಕುಮಾರ ಸ್ವಾಮಿಗಳು, ಚಂದ್ರಶೇಖರ ದೇವರು ಗದಗ, ವಿ.ನಟರಾಜು ಮಾವಿನನಕುರ್ಕೆ, ಮಹಾದೇವಮ್ಮನವರು ಬೆನಾಳ, ಬಿ.ಆರ್.ಹಿರೇಮಠ ಬೆಂಗಳೂರು, ಗದಗ ನಗರದ ವೀರೇಶ ಕೂಗುಮಠ ಬಸವರಾಜ ಕೂಗುಮಠ ಕುಟುಂಬದವರು, ಆರ್. ಅರ್.ಹಿರೇಮಠ, ಹರೀಶ್ ದಾವಣಗೆರೆ, ಹರೀಶ ಹಿರಿಯೂರು, ಬಾಳಯ್ಯ ಇಂಡಿಮಠ, ಶರಣುಗೌರ ಪಾಟೀಲ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

# ಎಲ್‌ಐಸಿ ಅತಿ ದೊಡ್ಡ ವಿಮಾ ಸಂಸ್ಥೆಯಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜೀವ ವಿಮಾ ನಿಗಮ ಗದಗ 1ನೇ ಶಾಖೆಯ 45ನೇ ವರ್ಷದ ವಾರ್ಷಿಕೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎಸ್‌ಡಿಎಂಬಿಎಸ್ ಚಕ್ರವರ್ತಿ, ಎಂಎಂ ರತ್ನಪ್ರಭಾ ಮತ್ತು ಎಂಎಸ್ ಚಿದಾನಂದ ಜ್ಯೋತಿ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಎಸ್‌ಡಿಎಂ ಚಕ್ರವರ್ತಿ ಮಾತನಾಡಿ, ಎಲ್‌ಐಸಿ ದೇಶದಲ್ಲೇ ಅತಿ ದೊಡ್ಡ ವಿಮಾ ಸಂಸ್ಥೆಯಾಗಿದ್ದು, ಈ ವಿಮಾ ಸಂಸ್ಥೆ ತನ್ನ ಗ್ರಾಹಕರ ಹಿತರಕ್ಷಣೆಗಾಗಿ ಕೆಲಸ ಮಾಡುತ್ತಿದ್ದು, ಇದೀಗ ತನ್ನ ಎಲ್ಲಾ ಪಾಲಿಸಿಗಳನ್ನು ಹೊಸದಾಗಿ ನವೀಕರಿಸಿದೆ. ಗ್ರಾಹಕರು ಹೆಚ್ಚು ಹೆಚ್ಚು ಪಾಲಿಸಿಗಳನ್ನು ಪಡೆದು ತಮ್ಮ ಜೀವನವನ್ನು ಆರ್ಥಿಕವಾಗಿ ಭದ್ರಪಡಿಸಿಕೊಳ್ಳಬೇಕು ಎಂದು ಹೇಳಿದರು.

ಎಂಎಂ ರತ್ನಪ್ರಭಾ ಮಾತನಾಡಿ, ಗದಗ 1ನೇ ಶಾಖೆ ಧಾರವಾಡ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಈ ಸ್ಥಾನ ಪಡೆಯಲು ವಿಮಾ ಪ್ರತಿನಿಧಿಗಳು ಶ್ರಮ ವಹಿಸಿದ್ದಾರೆ. ಭಾರತೀಯ ಜೀವ ವಿಮಾ ನಿಗಮ ಭಾರತ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತಿದ್ದು, ತನ್ನ ಎಲ್ಲಾ ಶೇರುಗಳನ್ನು ಸರ್ಕಾರದ ಜನೋಪಯೋಗಿ ಕಾರ್ಯಗಳಲ್ಲಿ ತೊಡಗಿಸಿದೆ ಎಂದು ಹೇಳಿದರು.

ಧಾರವಾಡದ ಎಂಎಸ್ ಚಿದಾನಂದ ಉಪಸ್ಥಿತರಿದ್ದರು. ಕಾರ್ಯಕ್ರಮ ಅಧ್ಯಕ್ಷತೆಯನ್ನು ಭಾರತೀಯ ಜೀವ ವಿಮಾ ನಿಗಮದ ಮುಖ್ಯ ಶಾಖಾಧಿಕಾರಿ ಭಜಂತ್ರಿ ವಹಿಸಿದ್ದರು. ಅಭಿವೃದ್ಧಿ ಅಧಿಕಾರಿಗಳು, ವಿಮಾ ನೌಕರರು ಹಾಗೂ ಪ್ರತಿನಿಧಿಗಳು ಭಾಗವಹಿಸಿದ್ದರು. ಉಪಶಾಖಾಧಿಕಾರಿ ಮಹಾಂತೇಶ ಕಾರ್ಯಕ್ರಮ ನಿರೂಪಿಸಿದರು.

# ನಾಟಕಗಳು ಸಾಮಾಜಿಕ ಸಂದೇಶ ಸಾರುತ್ತವೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಮಾಜದಲ್ಲಿ ನಡೆಯುತ್ತಿರುವ ವಿಷಯ, ಘಟನೆ, ವಿಚಾರ ಹಾಗೂ ಸಮಸ್ಯೆಗಳು ಸೇರಿದಂತೆ ಹಲವಾರು ಪ್ರಚಲಿತ ವಿದ್ಯಮಾನಗಳ ಕುರಿತು ನಾಟಕಗಳು ಜನರಿಗೆ ಅರ್ಥಪೂರ್ಣವಾದ ಸಂದೇಶಗಳನ್ನು ನೀಡುತ್ತವೆ ಎಂದು ರಂಗನಿರ್ದೇಶಕರಾದ ಡಾ.ಪ್ರಕಾಶ ಗರುಡ ಹೇಳಿದರು. ಶುಕ್ರವಾರ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಸಭಾಭವನದಲ್ಲಿ ಆಯೋಜಿಸಿದ್ದ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ರಂಗಭೂಮಿಯು ಜನರಿಗೆ ಹಲವಾರು ವಿಷಯಗಳ ಕುರಿತು ಮನವರಿಕೆ ಮಾಡಿ ತಿಳುವಳಿಕೆಯನ್ನು ಮೂಡಿಸುತ್ತದೆ. ನೋಡುಗರಿಗೆ ಮನರಂಜನೆಯೊಂದಿಗೆ ಮಾಹಿತಿಯನ್ನು ನೀಡುತ್ತವೆ. ರಂಗಾಯಣವು ಅನೇಕ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ರಂಗಭೂಮಿಯನ್ನು ಬೆಳೆಸುವ ಕಾರ್ಯವನ್ನು ಮಾಡುತ್ತಿದೆ ಎಂದು ಅವರು ಹೇಳಿದರು.




ರಂಗಾಯಣ ನಿರ್ದೇಶಕರಾದ ಡಾ. ರಾಜು ತಾಳಿಕೋಟಿ ಅಧ್ಯಕ್ಷತೆ ವಹಿಸಿ ಮಾತನಾಡಿ, ರಂಗಾಯಣವು ರಂಗಭೂಮಿಯ ಕಲೆಯನ್ನು ಉಳಿಸಿ-ಬೆಳೆಸುವುದರ ಜೊತೆಗೆ ಕಲಾವಿದರಿಗೂ ಹಲವಾರು ಅವಕಾಶಗಳನ್ನು ನೀಡಿ ಪ್ರೋತ್ಸಾಹವನ್ನು ನೀಡುತ್ತಿದೆ. ಆಧುನಿಕ ಭರಾಟೆಯಲ್ಲಿ ನಾಟಕಗಳು ನಶಿಸಿ ಹೋಗುತ್ತಿವೆ. ಇಂತಹ ಸಂದರ್ಭದಲ್ಲಿ ರಂಗಾಯಣವು ನಾಟಕಗಳನ್ನು ಪ್ರದರ್ಶನ ಮಾಡುವ ಮೂಲಕ ರಂಗಭೂಮಿಯನ್ನು ಬೆಳೆಸುವ ಕಾರ್ಯವನ್ನು ಮಾಡುತ್ತಿದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ರಂಗಾಸಕ್ತರು ಬರುವುದರ ಮೂಲಕ ರಂಗಾಯಣದ ಬೆಳವಣಿಗೆಗೆ ಸಹಕಾರವನ್ನು ನೀಡಬೇಕು ಎಂದರು.

ರಂಗಾಯಣದ ಆಡಳಿತಾಧಿಕಾರಿಗಳಾದ ಶಶಿಕಲಾ ವಿ.ಹುಡೇದ ಸ್ವಾಗತಿಸಿದರು. ಸಾಹಿತಿಗಳು, ರಂಗಾಸಕ್ತರು ಸೇರಿದಂತೆ ಇತರರು ಉಪಸ್ಥಿತರಿದ್ದರು. ನಂತರ ಶಕೀಲ್ ಅಹ್ಮದ್ ಅವರು ನಿರ್ದೇಶಿಸಿದ ‘ತಿಂಡಿಗೆ ಬಂದ ತುಂಡೇರಾಯ’ ನಾಟಕವನ್ನು ನಿರ್ದಿಗಂತ ಕಲಾವಿದರು ಪ್ರದರ್ಶಿಸಿದರು.

# ಪ್ರತಿಭಾ ಪರೀಕ್ಷೆಯಲ್ಲಿ ಉತ್ತೀರ್ಣ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಅಸುಂಡಿಯ ಎಚ್.ಸಿ.ಇ.ಎಸ್. ಪ್ರೌಢಶಾಲೆಯಲ್ಲಿ 9ನೇ ವರ್ಗದಲ್ಲಿ ಓದುತ್ತಿರುವ ವಿದ್ಯಾರ್ಥಿನಿ ನಿವೇದಿತಾ ಸೂಡಿ ರಾಜಲಕ್ಷ್ಮೀ ಚಿಲ್ಡ್ರನ್ ಫೌಂಡೇಶನ್ ವತಿಯಿಂದ ನಡೆಸಲಾದ ಪ್ರತಿಭಾ ಪರೀಕ್ಷೆ ಹಾಗೂ ಸಂದರ್ಶನದಲ್ಲಿ ಉತ್ತೀರ್ಣಳಾಗಿದ್ದಾಳೆ.

ಹುಬ್ಬಳ್ಳಿಯಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿಪತ್ರ ಪಡೆದುಕೊಂಡಿದ್ದು, ಈ ವಿದ್ಯಾರ್ಥಿನಿಗೆ ಆಡಳಿತ ಮಂಡಳಿ, ಎಸ್.ಡಿ.ಎಮ್.ಸಿ., ಶಾಲಾ ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

## ಬಿಜೆಪಿ ಮೈತ್ರಿ ಬಿಡಿ ಎಂದ ಅಖಿಲೇಶ್ ಯಾದವ್; ಎಮರ್ಜೆನ್ಸಿ ನೆನಪಿಸಿದ ಜೆಡಿಯು!



■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಜೆಪಿ ನೇತೃತ್ವದ ಆಡಳಿತಾರೂಢ ಎನ್‌ಡಿಎ ತೊರೆಯುವಂತೆ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಕೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಜೆಡಿಯು ಪಕ್ಷದ ಹಿರಿಯ ಸದಸ್ಯ ಕೆ.ಸಿ. ತ್ಯಾಗಿ ತುರ್ತು ಪರಿಸ್ಥಿತಿಯನ್ನು ಅಖಿಲೇಶ್ ಅವರಿಗೆ ನೆನಪಿಸಿ ಕಾಂಗ್ರೆಸ್‌ನೊಂದಿಗೆ ಮೈತ್ರಿಯನ್ನು ನೀವೆ ಕೊನೆಗೊಳಿಸಿ ಎಂದು ಹೇಳಿದ್ದಾರೆ.

ರಾಷ್ಟ್ರೀಯ ನಾಯಕ ಜೈ ಪ್ರಕಾಶ್ ನಾರಾಯಣ್ ಅವರ 122 ನೇ ಜನ್ಮ ವಾರ್ಷಿಕೋತ್ಸವದಂದು ಅವರ ಸ್ಮಾರಕಕ್ಕೆ ಭೇಟಿ ನೀಡುವುದನ್ನು ಉತ್ತರ ಪ್ರದೇಶ ಪೊಲೀಸರು ತಡೆದ ನಂತರ ಲಕ್ನೋದಲ್ಲಿನ ತಮ್ಮ ನಿವಾಸದ ಹೊರಗೆ ಸಮಾಜವಾದಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಯಾದವ್ ಈ ಹೇಳಿಕೆ ನೀಡಿದ್ದಾರೆ.

“ಜೈ ಪ್ರಕಾಶ್ ನಾರಾಯಣ್ ನೇತೃತ್ವದ ಚಳವಳಿಯು ಕಾಂಗ್ರೆಸ್‌ನ ಸರ್ವಾಧಿಕಾರದ ವಿರುದ್ಧವಾಗಿತ್ತು. ಜೂನ್ 25 (1975) ರಂದು ತುರ್ತು ಪರಿಸ್ಥಿತಿಯನ್ನು ಹೇರಲಾಯಿತು. ಅಭಿವ್ಯಕ್ತಿ ಸ್ವಾತಂತ್ರ್ಯ ಇರಲಿಲ್ಲ. ಅಖಿಲೇಶ್ ಯಾದವ್ ಅವರ ಹೇಳಿಕೆಯು ಅನುಚಿತವಾಗಿದೆ ” ಎಂದು ಕೆಸಿ ತ್ಯಾಗಿ ಹೇಳಿದ್ದಾರೆ. “ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಅವರ ತಂದೆ (ಮುಲಾಯಂ ಸಿಂಗ್ ಯಾದವ್) ಮತ್ತು ನಿತೀಶ್ ಕುಮಾರ್ ಇಬ್ಬರೂ ಜೈಲು ಪಾಲಾಗಿದ್ದರು ಎಂದು ನಾನು ಅವರಿಗೆ ನೆನಪಿಸಲು ಬಯಸುತ್ತೇನೆ. ಜನರ ಸ್ವಾತಂತ್ರ್ಯವನ್ನು ಮೊಟಕುಗೊಳಿಸಿದ ಮತ್ತು ಎಲ್ಲಾ ಪ್ರಜಾಸತ್ತಾತ್ಮಕ ಮಾನದಂಡಗಳನ್ನು ಉಲ್ಲಂಘಿಸುವ ಪಕ್ಷದೊಂದಿಗೆ ಅವರು ತಮ್ಮ ಪಾಲುದಾರಿಕೆಯನ್ನು ಕೊನೆಗೊಳಿಸಬೇಕು” ಎಂದು ತ್ಯಾಗಿ ಹೇಳಿದ್ದಾರೆ.

# ಜಮ್ಮು ಕಾಶ್ಮೀರ । ನ್ಯಾಷನಲ್ ಕಾನ್ಫರೆನ್ಸ್ ಸರ್ಕಾರಕ್ಕೆ ಆಮ್ ಆದ್ಮಿ ಪಕ್ಷ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ

ಇತ್ತಿಚೆಗೆ ನಡೆದ ಜಮ್ಮು ಕಾಶ್ಮೀರ ಚುನಾವಣೆಯಲ್ಲಿ ಮೊದಲ ಬಾರಿಗೆ ಖಾತೆ ತೆರೆದಿರುವ ಆಮ್ ಆದ್ಮಿ ಪಕ್ಷವು ರಾಜ್ಯದಲ್ಲಿ ನ್ಯಾಷನಲ್ ಕಾನ್ಫರೆನ್ಸ್ ಪಕ್ಷಕ್ಕೆ ಬೆಂಬಲ ನೀಡುವುದಾಗಿ ಶುಕ್ರವಾರ ಹೇಳಿದೆ ಎಂದು ಎಎನ್‌ಐ ವರದಿ ಮಾಡಿದೆ. ಪಕ್ಷದ ಏಕೈಕ ಚುನಾಯಿತ ಶಾಸಕರಾದ ಮೆಹ್ರಾಜ್ ಮಲಿಕ್ ಅವರು ಪಕ್ಷದ ಬೆಂಬಲ ಪತ್ರವನ್ನು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರಿಗೆ ಸಲ್ಲಿಸಿದ್ದಾರೆ.



ಇತ್ತೀಚೆಗೆ ನಡೆದ ಅಸೆಂಬ್ಲಿ ಚುನಾವಣೆಯಲ್ಲಿ ಮೆಹ್ರಾಜ್ ಮಲಿಕ್ ಅವರು ರಾಜ್ಯದ ದೋಡಾ ಸ್ಥಾನವನ್ನು ಗೆದ್ದಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡಿದ್ದ ನ್ಯಾಷನಲ್ ಕಾನ್ಫರೆನ್ಸ್ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದೆ.

ಸ್ಪರ್ಧಿಸಿದ್ದ 90 ಸ್ಥಾನಗಳಲ್ಲಿ ನ್ಯಾಷನಲ್ ಕಾನ್ಫರೆನ್ಸ್ 42 ಸ್ಥಾನಗಳನ್ನು ಗೆದ್ದಿದ್ದರೆ, ಕಾಂಗ್ರೆಸ್ 6 ಸ್ಥಾನಗಳನ್ನು ಪಡೆದುಕೊಂಡಿದೆ. ಜೊತೆಗೆ ಮೈತ್ರಿಯ ಮತ್ತೊಂದು ಮಿತ್ರಪಕ್ಷವಾದ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸ್‌ವಾದಿ) ಒಂದು ಸ್ಥಾನವನ್ನು ಗೆದ್ದಿದೆ.

# ಕಾಂಗ್ರೆಸ್ ಸರ್ಕಾರದ್ದು ತುಷ್ಟೀಕರಣದ ರಾಜಕೀಯ

▶▶ಮೊದಲನೇ ಪುಟದಿಂದ

ಇದೀಗ, ಬೇಲ್ ಕೊಟ್ಟು ಎರಡು ತಿಂಗಳಲ್ಲಿ ಕೇಸ್ ಹಿಂಪಡೆಯುತ್ತಾರೆ ಎಂದು ಹೇಳಿದರು.

ಅಂದಿನ ಪೊಲೀಸ್ ಅಧಿಕಾರಿಗಳು ಯೋಚನೆ ಮಾಡಿಯೇ ಪ್ರಕರಣ ದಾಖಲಿಸಿದ್ದರು. ಸ್ವಲ್ಪ ಮೈ ಮರೆತಿದ್ದರೆ ನಮ್ಮ ಕೊಲೆಯಾಗುತ್ತಿತ್ತು ಎಂದು ಪೊಲೀಸ್ ಅಧಿಕಾರಿಯೇ ಹೇಳಿದ್ದರು. ಆ ಅಧಿಕಾರಿಯ ಹೆಸರು ಹೇಳಿದರೆ ಕಾಂಗ್ರೆಸ್ ಸೇಡಿನ ಕ್ರಮ ಕೈಗೊಳ್ಳುತ್ತದೆ ಎಂದರು.

ರಾಜ್ಯ ಸರ್ಕಾರದ ವಿರುದ್ಧ ಕಾಂಗ್ರೆಸ್ ಶಾಸಕ ರಾಜು ಕಾಗೆ ಅಸಮಾಧಾನ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಈ ಹಿಂದೆ ರಾಯ-ರೆಡ್ಡಿ, ಜಾರಕಿಹೊಳಿ ಸೇರಿದಂತೆ ಹಲವರು ಮಾತನಾಡಿದ್ದರು. ಮೊನ್ನೆ ಬಿ.ಆರ್. ಪಾಟೀಲ್ ಈ ಸರ್ಕಾರದಲ್ಲಿ ಅಧಿಕಾರಿಗಳಿಗೆ ಸೊಕ್ಕು ಜಾಸ್ತಿಯಾಗಿದೆ ಎಂದಿದ್ದಾರೆ. ಮಳೆಯಾಗಿ ರಸ್ತೆ ಹದಗೆಟ್ಟಿವೆ, ಅಭಿವೃದ್ಧಿ ಕಾರ್ಯಗಳಾಗುತ್ತಿಲ್ಲ. ವೃದ್ಧಾಪ್ಯ ವೇತನ, ವಿಧವಾ ವೇತನದ ಹಣ ಸಿಗುತ್ತಿಲ್ಲ. ಒಂದು ರೀತಿಯಲ್ಲಿ ಸರ್ಕಾರ ದಿವಾಳಿಯ ಹಂತಕ್ಕೆ ಹೋಗುತ್ತಿದೆ. ಹಿಮಾಚಲ, ಪಂಜಾಬ್, ರಾಜ್ಯಗಳಲ್ಲಿ ಅದೇ ಪರಿಸ್ಥಿತಿಯಾಗಿದೆ. ಬೇರೆ ಬೇರೆ ರಾಜ್ಯದ ಮಂತ್ರಿಗಳ ಜೊತೆಗೆ ವಯಕ್ತಿಕವಾಗಿ ಮಾತನಾಡುವಾಗ, ಉಚಿತ ಯೋಜನೆಯಿಂದ ಈ ರೀತಿಯಾಗಿದೆ ಎಂದು ಕೆಲವರು ಅನೌಪಚಾರಿಕವಾಗಿ ಹೇಳಿದ್ದಾರೆ.

ಗ್ಯಾರಂಟಿ ಯೋಜನೆ ಕಾಂಗ್ರೆಸ್ ಪಕ್ಷಕ್ಕೆ ನುಂಗಲಾರದ ತುತ್ತಾಗಿದೆ. ರಾಜ್ಯ ಒಂದು ವರ್ಷದಲ್ಲಿ 1 ಲಕ್ಷ ಕೋಟಿಗೂ ಹೆಚ್ಚು ಸಾಲ ಮಾಡಿದೆ. ರಾಜ್ಯವನ್ನು ಸಾಲದ ಕೂಪಕ್ಕೆ ತಳ್ಳುತ್ತಿದ್ದಾರೆ. ಪರಿಸ್ಥಿತಿ ಇನ್ನೂ ಗಂಭೀರವಾಗಿದ್ದು, ಇದರ ಪರಿಣಾಮ ಸಂಪೂರ್ಣ ರಾಜ್ಯದ ಮೇಲೆ ಆಗಲಿದೆ ಎಂದರು.

ದಸರಾ ಹಬ್ಬದ ಜಾಹೀರಾತು ವಿಷಯವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವ ಪ್ರಹ್ಲಾದ ಜೋಶಿ, ಈ ವಿಚಾರದಲ್ಲಿ ಬಾಲವೇ ನಾಯಿಯನ್ನು ಅಲ್ಲಾಡಿಸಿತು ಎನ್ನುವ ಹಾಗೆ ಹೈ ಕಮಾಂಡನ್ನೇ ಬೆದರಿಸುವ ಕೆಲಸ ಮಾಡುತ್ತಿದ್ದಾರೆ. ನನಗಿರುವ ಮಾಹಿತಿಯ ಪ್ರಕಾರ, ನೀವು ಸುಮ್ಮನಾಗಿಸದಿದ್ದಲ್ಲಿ ನಾನು ಸುಮ್ಮನಿರುವುದಿಲ್ಲ ಎಂದು ಸಿಎಂ ಬೆದರಿಕೆ ಒಡ್ಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಮುಖಂಡರಾದ ಎಮ್.ಎಮ್. ಹಿರೇಮಠ, ಸಿದ್ದು ಪಲ್ಲೇದ, ಎಂ.ಎಸ್. ಕರಿಗೌಡ್ರ, ಕೋಟಿಗೌಡ್ರ ಮುಂತಾದವರಿದ್ದರು.




ಗದಗ ನಗರದ ಹಳೇ ಸರಾಫ ಬಜಾರದಲ್ಲಿರುವ ಶ್ರೀ ತುಳಜಾಭವಾನಿ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ಎಲ್ಲ ಸುಮಂಗಲಿಯರಿಗೆ ಸೇಬುಹಣ್ಣು, ಎಲೆ, ಅಡಿಕೆ, ಹೂವುಗಳೊಂದಿಗೆ ಉಡಿ ಸೇವೆಯನ್ನು ನಗರದ ವ್ಯಾಪಾರಸ್ಥರಾದ ರಾಜು ಬದಿ, ರಿತೇಶ ಕಾಟವಾ, ದೀಪಕ ಕಬಾಡಿ, ನಂದಕುಮಾರ ಬಸವಾ, ಸತೀಶ ಕಬಾಡಿ ಕುಟುಂಬದವರು ಸೇವೆಗೈದು ಶ್ರೀ ತುಳಜಾಭವಾನಿ ದೇವಿಯ ಕೃಪೆಗೆ ಪಾತ್ರರಾದರು.

# ಸತತ ಪ್ರಯತ್ನದಿಂದ ಯಶಸ್ಸು ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಭೂಮಿಗೆ ಬಿದ್ದ ಬೀಜಗಳು, ಎದೆಗೆ ಬಿದ್ದ ಅಕ್ಷರಗಳು ಎಂದಿಗೂ ಫಲ ನೀಡುತ್ತವೆ ಎಂಬ ಮಾತಿನಂತೆ ವಿದ್ಯಾರ್ಥಿ ಜೀವನ ಬಂಗಾರದ ಬದುಕು. ಈ ಸಮಯದಲ್ಲಿ ಸತತ ಪ್ರಯತ್ನದಿಂದ ಅಭ್ಯಾಸದಲ್ಲಿ ನಿರತರಾದಲ್ಲಿ ಯಶಸ್ಸು ಸಾಧ್ಯವಾಗುತ್ತದೆ ಎಂದು ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ(ಆರ್‌ಎಂಎಸ್‌ಎ) ಎಸ್‌ಎಸ್‌ಎಲ್‌ಸಿ ಮಕ್ಕಳಿಗಾಗಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ(ಡಿಪಿಇಪಿ) ಶಾಲೆಯಲ್ಲಿ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಎಸ್‌ಎಸ್‌ಎಲ್‌ಸಿ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಹಂತವಾಗಿದ್ದು, ಈ ತರಬೇತಿ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಶಿಕ್ಷಕ ಶರಣು ಪೂಜಾರ ಮಾತನಾಡಿ, ಸರಕಾರಿ ಶಾಲಾ ಮಕ್ಕಳಿಗಾಗಿ ಮಾಹಾಂತೇಶ ಕೆಂಚನಾಯ್ಕರ, ಮಾಹಾಂತೇಶ ಮಾನೇಗಾರ ರಜಾದಿನಗಳಲ್ಲಿ ಮಕ್ಕಳಿಗಾಗಿ ಪ್ರತಿನಿತ್ಯ ಶಿಕ್ಷಣದ ಜೋತೆಯಲ್ಲಿ ಊಟ ನೀಡಿ ಮಕ್ಕಳ ಭವಿಷ್ಯಕ್ಕೆ ಸಹಾಯ ಸಹಕಾರ ನೀಡುತ್ತಿರುವುದು ಶ್ಲಾಘನಿಯವಾದ ಕಾರ್ಯವಾಗಿದೆ. ಪ್ರತಿ ವಿಷಯವಾರು ಶಿಕ್ಷಕರು ಬೋಧನಾ ಕಾರ್ಯದಲ್ಲಿ ತೋಡಗಿ-ಕೊಂಡಿದ್ದು, ಈ ತರಬೇತಿಯ ಸದುಪಯೋಗ ಪಡೆದುಕೊಂಡು ಉತ್ತಮ ಫಲಿತಾಂಶ ಸಾಧಿಸಬೇಕು ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕೆಂಚನಾಯ್ಕರ, ಮಾಹಾಂತೇಶ ಮಾನೇಗಾರ, ಶಿಕ್ಷಕರಾದ ಬಸವರಾಜ ಗೌರಿಮನಿ, ಜಿ.ಎಂ. ಪಿರಂಗಿ, ಮಹೇಶ ಕೊಂಡಿಕೊಪ್ಪ, ಶಿವಲಿಂಗಪ್ಪ ಕೊಂಡಿಕೊಪ್ಪ, ಇಸ್ಮಾಯಿಲ್ ಮುಜಾವಾರ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka